MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

| | | | | | | |
|---|---|---|---|---|---|---|
| ಸಂಪುಟ: 05 | ಸಂಚಿಕೆ: 95 | ಶುಕ್ರವಾರ : 30-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00 |
| VOLUME: 05 | ISSUE: 95 | FRIDAY : 30-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00 |


* ರಾಜ್ಯಮಟ್ಟದ ಪುರುಷರ ದೇಹದಾರ್ಢ್ಯ ಸ್ಪರ್ಧೆ * ರಾತ್ರಿ 10.30ರವರೆಗೆ ನಡೆದ ಸ್ಪರ್ಧೆ * ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ವಿಶೇಷತೆ

## ಮಿಸ್ಟರ್ ರಾಯಚೂರು ಉತ್ಸವ -2026 ಕಿರೀಟ ಮುಡಿಗೇರಿಸಿಕೊಂಡ ಬೆಳಗಾವಿ ಜಿಲ್ಲೆಯ ಕುವರ ಪ್ರಶಾಂತ ಕನ್ನೂರಕರ

ಯುವಮಾರ್ಗ ಸುದ್ದಿ

**ರಾಯಚೂರು ಜ.29**-ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026 ನಿಮತ್ತ ಜನವರಿ 28ರಂದು ರಾಯಚೂರನಲ್ಲಿ ನಡೆದ ರಾಜ್ಯ ಮಟ್ಟದ ಪುರುಷರ ದೇಹದಾರ್ಢ್ಯ ಸ್ಪರ್ಧೆಯಲ್ಲಿ ಬೆಳಗಾವಿ ಜಿಲ್ಲೆಯ ದೇಹದಾರ್ಢ್ಯ ಪಟು ಪ್ರಶಾಂತ ಕನ್ನೂರಕರ ಅವರು ಮಿಸ್ಟರ್ ರಾಯಚೂರು ಉತ್ಸವ-2026ರ ಕಿರೀಟವನ್ನು ಮುಡಿಗೇರಿಸಿಕೊಂಡರು.

ಬೆಳಗಾವಿಯ ಮತ್ತೊಬ್ಬ ದೇಹದಾರ್ಢ್ಯ ಪಟು ಪ್ರತಾಪ ವಿಠ್ಠಲ್ ಕಲಕುಂದ್ರಿಕರ ಅವರು ರನರ್ ಆಫ್ ಆಗಿ ಹೊರಹೊಮ್ಮಿದರು.

ರಾಯಚೂರಿನ ವೃಷಭ್ ವಶಿಷ್ಠ ಅವರು ಬೆಸ್ಟ್ ಪೋಜರ್ ಸ್ಥಾನಕ್ಕೆ ತೃಪ್ತಿಪಟ್ಟರು.

ವಿಜೇತರಿಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ, ಮಹಾನಗರ ಪಾಲಿಕೆ ಕಮಿಷನರ್ ಜುಬಿನ್ ಮೋಹಪಾತ್ರ, ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘದ ಅಧ್ಯಕ್ಷರಾದ ಮಂಜುನಾಥ ಹಾನಗಲ್, ಸಂಘದ ಫೌಂಡರ್ ಹಾಗೂ ಕಾರ್ಯದರ್ಶಿ ಸುಧಾಕರ ಕುರುಡಿ ಅವರು ವಿಜೇತರಿಗೆ ಟ್ರಾಫಿ, ಮೆಡಲ್, ಪ್ರಮಾಣ ಪತ್ರ ಮತ್ತು ಕ್ರಮವಾಗಿ ಪ್ರಥಮ






ಬಹುಮಾನ 30,000 ರೂ, ದ್ವಿತೀಯ ಬಹುಮಾನ 10,000 ರೂ ಹಾಗೂ ತೃತೀಯ ಬಹುಮಾನ 5000 ರೂ.ಗಳನ್ನು ನೀಡಿ ಸನ್ಮಾನಿಸಿ ಗೌರವಿಸಿದರು.


ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಸಹಯೋಗದಲ್ಲಿ ನಗರದ ಮಹಾತ್ಮ ಗಾಂಧೀ ಜಿಲ್ಲಾ ಕ್ರೀಡಾಂಗಣದಲ್ಲಿ ಈ ದೇಹದಾರ್ಢ್ಯ ಸ್ಪರ್ಧೆ ನಡೆಯಿತು.

ಗಂಗಾಧರ ಎಂ., ಶಂಕರ ಪಿಲ್ಲೆ, ಮೈಬೂಬ್, ಸುಧಾಕರ, ಸುನೀಲ್ ರಾವುತ್, ಕಿರಣಕುಮಾರ, ಸಬರುದ್ದೀನ್ ಪಾಶಾ ಸೇರಿದಂತೆ ಇನ್ನೀತರರು ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು.

55 ಕೆ.ಜಿ., 60 ಕೆ.ಜಿ.,65 ಕೆ.ಜಿ.,70 ಕೆ.ಜಿ., 75 ಕೆ.ಜಿ.,80 ಕೆ.ಜಿ. ಮತ್ತು 80+ ಕೆ.ಜಿ ಸೇರಿದಂತೆ ಒಟ್ಟು ಏಳು

ವಿಭಾಗದಲ್ಲಿ ಸ್ಪರ್ಧೆ ನಡೆಯಿತು.

ಪ್ರತಿ ವಿಭಾಗದಲ್ಲಿ ವಿಜೇತರಾದ ತಲಾ ಐದು ಸ್ಪರ್ಧಾಳುಗಳಿಗೆ ಕ್ರಮವಾಗಿ 15,000, 5000, 4000, 3000 ಮತ್ತು (2ನೇ ಪುಟಕ್ಕೆ>>>)




ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರಕ್ಕೆ ಜಿ.ಪಂ ಸಿಇಓ ಚಾಲನೆ

## ಗ್ರಾಮ ಪಂಚಾಯತ ಮಟ್ಟದಿಂದ ಸರಿಯಾದ ಮಾಹಿತಿ ನೀಡಿ: ಈಶ್ವರ ಕುಮಾರ್



ಯುವಮಾರ್ಗ ಸುದ್ದಿ

**ರಾಯಚೂರು ಜ.29**- ಜಿಲ್ಲಾ ಮಾನವ ಅಭಿವೃದ್ಧಿ-2025 ಮತ್ತು ಸಮಗ್ರ ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-2031ರವರೆಗೆ ವರದಿ ತಯಾರಿಕೆಗೆ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಪೂರಕವಾದ ವರದಿ ತಯಾರಿಕೆಗಾಗಿ ಜಿಲ್ಲೆಯ ಪ್ರತಿಯೊಂದು ಗ್ರಾಮ ಪಂಚಾಯತಿ ಮಟ್ಟದಿಂದ ಸರಿಯಾದ ಮಾಹಿತಿಯನ್ನು ನೀಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ಜನವರಿ 29ರ ಗುರುವಾರ ದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಾನವ ಅಭಿವೃದ್ಧಿ ವರದಿ-2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-2031 ವರದಿಗಳ ತಯಾರಿಕೆ ಕುರಿತು ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯು ಮಹತ್ವಾಕಾಂಕ್ಷೆ ಜಿಲ್ಲೆಯಾಗಿದೆ. ಅಲ್ಲದೆ ಇಲ್ಲಿನ ಎರಡು ತಾಲೂಕುಗಳು ಬ್ಲಾಕ್ ಮಹತ್ವಾಕಾಂಕ್ಷೆ ಜಿಲ್ಲೆಯಾಗಿದ್ದು, ಜಿಲ್ಲೆಯಲ್ಲಿನ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಫಲಿತಾಂಶ, ಆರೋಗ್ಯ, ಕೃಷಿ ಕ್ಷೇತ್ರ ಸೇರಿದಂತೆ ಇತರೆ ಕ್ಷೇತ್ರದಲ್ಲಿ ಹೇಗೆ ವರದಿಯನ್ನು ತಯಾರಿಸಬೇಕೆಂದು ತರಬೇತಿ ಕಾರ್ಯಾಗಾರದಲ್ಲಿ ಮಾಹಿತಿ ನೀಡಲಾಗುತ್ತದೆ. ಎಲ್ಲಾ ಅಧಿಕಾರಿಗಳು ಸರಿಯಾಗಿ ತಿಳಿದುಕೊಳ್ಳಬೇಕು ಎಂದರು.

ಮಾಹಿತಿ ನೀಡುವ ಸಂಬಂಧದಲ್ಲಿ ಕೆಳಮಟ್ಟದ ಅಧಿಕಾರಿ ನೀಡುವ ಮಾಹಿತಿಯನ್ನು ಕ್ರಾಸ್ ಚೆಕ್ ಮಾಡಬೇಕು. ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಜಿಲ್ಲೆಯ ಜನರ ಕಲ್ಯಾಣ, ಶಿಕ್ಷಣ, ಆರೋಗ್ಯ ಮತ್ತು ಆದಾಯದಂತಹ ಅಂಶಗಳನ್ನು ಅಳೆಯಲು ಬಹಳ ಮುಖ್ಯವಾದ ವರದಿಯಾಗಿದ್ದು, ಎಲ್ಲಾ ಇಲಾಖೆ ಅಧಿಕಾರಿಗಳು ವರದಿ ತಯಾರಿಕೆ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿಯನ್ನು ನೀಡುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಸಹಕರಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಂದ ಸೂಚಿಸಿದರು.

ಈ ವೇಳೆ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಿರಿಯ ನಿರ್ದೇಶಕ ಹಾಗೂ ಸರ್ಕಾರದ ಪದನಿಮಿತ್ತ ಜಂಟಿ ನಿರ್ದೇಶಕ ಬಸವರಾಜು ಎಸ್. ಮಾತನಾಡಿ, ಜಿಲ್ಲೆಗಳ ಮಾನವ ಅಭಿವೃದ್ಧಿ 2025 ಸಿದ್ಧಪಡಿಸಲು ಎಲ್ಲಾ 31 ಜಿಲ್ಲೆಗಳಲ್ಲಿಯೂ ತರಬೇತಿ ನಡೆಸಲಾಗುವುದು. ಆರೋಗ್ಯ, ಶಿಕ್ಷಣ ಹಾಗೂ ಜನಗಳ ಜೀವನ ಮಟ್ಟದ ಮೇಲೆ ಅಭಿವೃದ್ಧಿಯ ಅಂಶಗಳು ಒಳಪಟ್ಟಿದೆ. 2015ರ ನಂತರ ಈ ಕುರಿತು ವರದಿ ಮಂಡನೆಯಾಗಿಲ್ಲ. ವಿವಿಧ ಮುಖ್ಯ ಇಲಾಖೆಗಳ ಜೊತೆಗೂಡಿ ಈ ವರದಿಯನ್ನು ತಯಾರಿಸಲು ಸಹಕರಿಸಬೇಕು ಎಂದು ಕೋರಿದರು. (2ನೇ ಪುಟಕ್ಕೆ>>>)

## ಫೆ.1 ರಂದು ಹಿಂದೂ ಸಮ್ಮೇಳನ ಹಾಗೂ ಬೃಹತ್ ಶೋಭಾಯಾತ್ರೆ : ನೀಲಕಂಠಪ್ಪ




ಯುವಮಾರ್ಗ ಸುದ್ದಿ

**ಮಾನ್ವಿ,ಜ.29**- ಪಟ್ಟಣದ ಪತ್ರಿಕಾ ಭವನದಲ್ಲಿ ಮಾನ್ವಿ ಹಿಂದೂ ಸಮ್ಮೇಳನ ಸಮಿತಿ ಅಧ್ಯಕ್ಷರಾದ ನೀಲಕಂಠಪ್ಪ ಮಾತನಾಡಿ ಮಾನ್ವಿ ಪಟ್ಟಣದಲ್ಲಿ ಫೆ.1 ರಂದು ಮಧ್ಯಾಹ್ನ 3 ಗಂಟೆಯಿಂದ ಎ.ಪಿ.ಎಂ.ಸಿ. ಆವರಣದಲ್ಲಿನ ಶ್ರೀ ಉದ್ಭವ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಟಿ.ಎ.ಪಿ.ಸಿ.ಎಂ.ಎಸ್. ಆವರಣದ ವರೆಗೆ ಬೃಹತ್ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದು ಸಂಜೆ 5ಕ್ಕೆ ಹಿಂದೂ ಸಮ್ಮೇಳನದ ದಿವ್ಯಸಾನಿಧ್ಯವನ್ನು ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು,ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು,ಚೀಕಲಪರ್ವಿ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು,ನಿಲಗಲ್ ಮಠದ ಶ್ರೀ ರೇಣುಕ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು,ಕಲ್ಲೂರು ದತ್ತಾತ್ರೇಯ ಮಠದ ಶ್ರೀ ಶಿವರಾಮನಂದ ಭಾರತಿ ಮಹಾಸ್ವಾಮಿಗಳು, ನವಲಕಲ್ ಮಠದ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು,ಅಡವಿ ಅಮರೇಶ್ವರ ಮಠದ ಶ್ರೀ ತೋಂಟದಾರ್ಯ ಮಹಾಸ್ವಾಮಿಗಳು,ಬಾಗಲವಾಡ ಶಿವಯ್ಯಸ್ವಾಮಿಗಳು ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಸಿಂಧನೂರಿನ ಪ್ರಹ್ಲಾದ್ ಕಂದಗಲ್ ಸೇರಿದಂತೆ ತಾಲೂಕಿನ ಗಣ್ಯಮಾನ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.


ಹನುಮೇಶ್ ಸಾದಪುರ್, ಶರಣಬಸವ, ಗುರುರಾಜ ನಾಗಲಪುರ್, ಶರಣಬಸವ ಮುಂದಿನಮನೆ , ಈರಣ್ಣ ಮಡಿವಾಳ,ನಾಗರಾಜ ಚಿಕಲಪರ್ವಿ ಇದ್ದರು.

## ಸಿರವಾರ : ಗರ್ಭಿಣಿ ಸೊಸೆಯನ್ನು ಚಾಕುವಿನಿಂದ ಇರಿದು ಕೊಂದ ಮಾವ

ಯುವಮಾರ್ಗ ಸುದ್ದಿ

**ರಾಯಚೂರು,ಜ.29**- ಗರ್ಭಿಣಿ ಸೊಸೆಯನ್ನು ಮಾವ ಕೊಲೆ ಮಾಡಿರುವ ಹೃದಯವಿದ್ರಾವಕ ಘಟನೆ ಜಿಲ್ಲೆಯ ಸಿರವಾರ ತಾಲೂಕಿನ ಅಣಗಿ ಗ್ರಾಮದಲ್ಲಿ ನಡೆದಿದೆ.ರೇಖಾ(25)ಕೊಲೆಯಾದ ಮಹಿಳೆ.

ಆರೋಪಿ ಸಿದ್ದಪ್ಪನನ್ನು ಪೊಲೀಸರು ಬಂಧಿಸಿದ್ದಾರೆ. ಕಳೆದ ಎರಡು ತಿಂಗಳಿಂದ ತವರು ಮನೆಯಲ್ಲಿದ್ದ ಸೊಸೆ ಮರಳಿ ಮನೆಗೆ ಬಂದಾಗ ಜಗಳವಾಗಿತ್ತು. ಮನೆಯವರೆಲ್ಲರು ಹೊರಗೆ ಹೋಗಿದ್ದಾಗ ಮಾವ ಸಿದ್ದಪ್ಪ ಮತ್ತೆ ಜಗಳ ತೆಗೆದು ಅದು ವಿಕೋಪಕ್ಕೆ ತಿರುಗಿ ಏಕಾಏಕಿ ಚಾಕು ವಿನಿಂದ ರೇಖಾಗೆ ಇರಿದು ಅಲ್ಲಿಂದ ಪರಾರಿ ಯಾಗಿದ್ದ. ಈ ವೇಳೆ ಪ್ರಾಣ ಉಳಿಸಿಕೊಳ್ಳಲು ಮನೆಯಿಂದ ಹೊರಬಂದು ನರಳಾಡಿ ರೇಖಾ ನಡು ರಸ್ತೆಯಲ್ಲಿ ಪ್ರಾಣ ಬಿಟ್ಟಿದ್ದಾರೆ.ಸ್ಥಳೀಯರು ಪೊಲೀಸ ರಿಗೆ ಮಾಹಿತಿ



ನೀಡಿದ್ದು ಆರೋಪಿಯನ್ನುವಶಕ್ಕೆ ಪಡೆದಿದ್ದಾರೆ. ರೇಖಾ 4 ತಿಂಗಳ ಗರ್ಬಿಣಿ ಎಂದು ತಿಳಿದು ಬಂದಿದ್ದು ಪೊಲೀಸರು ವಿಚಾರಣೆ ಮುಂದುವರೆಸಿದ್ದಾರೆ. ಕವಿತಾಳ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

## ಅಂಗನವಾಡಿ ನೌಕರರ ಪರಿಹಾರಕ್ಕೆ ಒತ್ತಾಯಿಸಿ ಪ್ರತಿಭಟನೆ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.29**- ತಾಲೂಕಿನ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ದೀರ್ಘಕಾ ಲೀನ ಸಮಸ್ಯೆಗಳನ್ನು ಪರಿಹರಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ನೇತೃತ್ವದಲ್ಲಿ ಅಂಗನವಾಡಿ ನೌಕರರು ಸಿಡಿಪಿಓ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು. ಕಳೆದ 2023 ರಿಂದ ಜಾರಿ ಇರುವ ಪೇಸನ್, ಭತ್ಯೆ 2024-25 ನೇ ಸಾಲಿನಲ್ಲಿ ಎನ್‌ಪಿಎಸ್ ಹಾಗೂ ಗ್ರಾಚ್ಯುಟಿ ನೀಡಬೇಕೆಂದು ಒತ್ತಾಯಿಸಿದರು.

ಮತ್ತು ಇತರ ಸೌಲಭ್ಯಗಳನ್ನು ಕೇಂದ್ರಗಳ ಕಟ್ಟಡಗಳ ದುರಸ್ತಿ ಕುಡಿಯುವ ನೀರು, ಶೌಚಾಲಯ




ಸೇರಿದಂತೆ ಮೂಲಸೌಕರ್ಯ ಒದಗಿಸಬೇಕು ಎಂಬ ಬೇಡಿಕೆಗಳನ್ನು ಕೇರಿಸಿದರು. ಈ ಸಿಐಟಿಯು ಜಿಲ್ಲಾ ಜಂಟಿ ಕಾರ್ಯದರ್ಶಿ ರಮೇಶ ವೀರಾಪೂರು, ಅಂಗನವಾಡಿ ಸಂಘದ ಅಧ್ಯಕ್ಷೆ ಸರಸ್ವತಿ, ಕಾರ್ಯದರ್ಶಿ ಮಹೇಶ್ವರಿ, ಮುಖಂಡರಾದ ಲಕ್ಷ್ಮೀ ನಗನೂರ, ಸುಜಾತಾ, ಸುಮತಾ ನೀಲಮ್ಮ ಉಪಸ್ಥಿತರಿದ್ದರು.

# ಮೊದಲನೇಯ ಪುಟದಿಂದ

### ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರಕ್ಕೆ ಜಿ.ಪಂ ಸಿಇಓ ಚಾಲನೆ

## ಗ್ರಾಮ ಪಂಚಾಯತ ಮಟ್ಟದಿಂದ ಸರಿಯಾದ ಮಾಹಿತಿ ನೀಡಿ: ಈಶ್ವರ ಕುಮಾರ್

ರಾಜ್ಯ ಸರ್ಕಾರದ ಗ್ಯಾರೆಂಟಿ ಯೋಜನೆಗಳು ಜನಸಾಮಾನ್ಯರ ಮೇಲೆ ಬೀರಿರುವ ಪ್ರಭಾವ, ಜಿಲ್ಲೆ ಅಳವಡಿಸಿಕೊಂಡಿರುವ ಉತ್ತಮ ಅಭ್ಯಾಸಗಳು, ಇತರ ಜಿಲ್ಲೆಗಳಿಂದ ತೆಗೆದುಕೊಳ್ಳಬಹುದಾದ ಒಳ್ಳೆಯ ಮಾದರಿಗಳು ಸಹ ಅಭಿವೃದ್ಧಿ ದೃಷ್ಟಿಯಿಂದ ಮುಖ್ಯವೆನಿಸಿವೆ. ಆದ್ಯಾಗಿಯೂ ಲಿಂಗ ತಾರತಮ್ಯ, ನಿರುದ್ಯೋಗ, ಬಡತನ ಜನರನ್ನು ಕಾಡುತ್ತಿದೆ. ಈ ವರದಿ ಸಲ್ಲಿಸುವ ಕುರಿತು ಜಿಲ್ಲಾ ಮಟ್ಟದಲ್ಲಿಯೂ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತ ಸಿಇಒ ನೇತೃತ್ವದಲ್ಲಿ ಸಮಿತಿ ಸಹ ರಚಿಸಲಾಗಿದೆ. ಇದರಿಂದ ಅಭಿವೃದ್ಧಿ ಪೂರಕವಾದ ಅಂಶಗಳು ಬೆಳಕಿಗೆ ಬರುತ್ತದೆ ಎಂದರು.

ವಸ್ತುಸ್ಥಿತಿ ವರದಿಗೆ ಸಹಕಾರ ಅಗತ್ಯ: ಜಿಲ್ಲಾ ಮಾನವ ಅಭಿವೃದ್ಧಿ ವರದಿಗೆ ಅತ್ಯಂತ ಮಹತ್ವವಾದ ಮೌಲ್ಯವಿದೆ. ಇದು ದೀರ್ಘ, ಆರೋಗ್ಯಕರ ಮತ್ತು ಸೃಜನಾತ್ಮಕ ಜೀವನ ನಡೆಸಲು, ಶಿಕ್ಷಣ ಪಡೆಯಲು ಮತ್ತು ಯೋಗ್ಯ ಜೀವನ ಮಟ್ಟಕ್ಕೆ ಬೇಕಾದ ಸಂಪನ್ಮೂಲಗಳನ್ನು ಹೊಂದಲು ಅವಕಾಶ ನೀಡುತ್ತದೆ. ಹಾಗಾಗಿ ಅಧಿಕಾರಿಗಳು ತಾವು ತಯಾರಿಸುವ ವರದಿಯಿಂದ ಜಿಲ್ಲೆಯ ಅಭಿವೃದ್ಧಿ ಅವಲಂಬಿತವಾಗಿರುತ್ತದೆ. ವಸ್ತುಸ್ಥಿತಿ ವರದಿ ತಯಾರಿಕೆಗೆ ಅಧಿಕಾರಿಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಕರ್ನಾಟಕ ವಿಶ್ವವಿದ್ಯಾಲಯದ ಲೀಡ್ ಏಜೆನ್ಸಿ ಡಾ.ಜಗದ್ದೀಶ್, ಡಾ.ಕುಮಾರ್, ಜಿಲ್ಲಾ ಪಂಚಾಯತ್ ಯೋಜನಾ ಅಂದಾಜು ಮತ್ತು ಮೌಲ್ಯ ಮಾಪನಾಧಿಕಾರಿ ರಾಘವೇಂದ್ರ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ಮಿಸ್ಟರ್ ರಾಯಚೂರು ಉತ್ಸವ –2026 ಕಿರೀಟ ಮುಡಿಗೇರಿಸಿಕೊಂಡ ಬೆಳಗಾವಿ ಜಿಲ್ಲೆಯ ಕುವರ ಪ್ರಶಾಂತ ಕನ್ನೂರಕರ

2000 ರೂ ನಗದು ಬಹುಮಾನ, ಪ್ರಮಾಣ ಪತ್ರ ಮತ್ತು ಮೆಡಲ್ ನೀಡಿ ಸತ್ಕರಿಸಲಾಯಿತು. ಪೂರ್ಣಪಂದ್ಯ ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಜಿಪಂ ಸಿಇಓ: ದೇಹದಾರ್ಢ್ಯ ಸ್ಪರ್ಧೆಯು ಜನವರಿ 28ರ ರಾತ್ರಿ 7.30ಕ್ಕೆ ಆರಂಭವಾಯಿತು.

ಜಿಪಂ ಸಿಇಓ ಮಹಾನಗರ ಪಾಲಿಕೆಯ ಆಯುಕ್ತರು, ಅಪರ ಜಿಲ್ಲಾಧಿಕಾರಿಗಳು ಹಾಗೂ ಇನ್ನಿತರ ಅಧಿಕಾರಿಗಳೊಂದಿಗೆ

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು, ಪಂದ್ಯ ವೀಕ್ಷಕರ ಸಾಲಿನಲ್ಲಿ ಕುಳಿತು ಪಂದ್ಯ ಆರಂಭದಿಂದ ರಾತ್ರಿ 10.30ರವರೆಗೆ ಸತತ 3 ಗಂಟೆ ಸಮಯ ದೇಹದಾರ್ಢ್ಯ ಸ್ಪರ್ಧೆಯ ವೀಕ್ಷಣೆ ನಡೆಸಿ ಸ್ಪರ್ಧಾಳುಗಳಿಗೆ ಹುರಿದುಂಬಿಸಿದರು.

ರಾಯಚೂರು ಉತ್ಸವದ ಬಗ್ಗೆ ಸಲಹೆ ಕೇಳಲು ಜಿಲ್ಲಾಡಳಿತದಿಂದ ನಡೆಸಿದ ಸಂಘ ಸಂಸ್ಥೆಗಳ, ಗಣ್ಯರ, ನಾಗರಿಕರ, ಬುದ್ದಿ ಜೀವಿಗಳ, ಸಾಹಿತಿಗಳ, ಕಲಾವಿದರ ಮೊದಲ ಸಭೆಯಲ್ಲಿ ಕೇಳಿ ಬಂದ ಸಲಹೆಯಂತೆ ನಾವು ರಾಜ್ಯಮಟ್ಟದ ದೇಹದಾರ್ಢ್ಯ ಸ್ಪರ್ಧೆ ಆಯೋಜನೆ ಮಾಡಿ ಕ್ರೀಡಾಸಕ್ತರಿಗೆ ಸ್ಫೂರ್ತಿ ನೀಡಿದ್ದೇವೆ ಎಂದು ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾಧಿಕಾರಿಗಳು ಅಭಿಪ್ರಾಯ ಹಂಚಿಕೊಂಡರು.

ಸಮಾರಂಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಡಿವೈಎಸ್ಪಿ ಶಾಂತವೀರ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ತಹಸೀಲ್ದಾರ ಸುರೇಶ ವರ್ಮಾ, ಅಮರೇಶ ಬಿರಾದಾರ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಡಿಎಚ್ ಒ ಡಾ.ಸುರೇಂದ್ರ ಬಾಬು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ಸೇರಿದಂತೆ ಇನ್ನಿತರರು ಇದ್ದರು. ಡಾ.ದಂಡಪ್ಪ ಬಿರಾದಾರ ನಿರೂಪಿಸಿದರು.

## ಕೃತಗ್ಯತಾ ಟ್ರಸ್ಟ್ ಬೆಂಗಳೂರು ಇವರಿಂದ 5 ಶಾಲೆಗಳಿಗೆ ವಿಜ್ಞಾನ ಉಪಕರಣಗಳ ಕೊಡುಗೆ



ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.29–** ಪಟ್ಟಣದ ಗುರುಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೃತಗ್ಯತಾ ಟ್ರಸ್ಟ್ ಬೆಂಗಳೂರು ಇವರ ವತಿಯಿಂದ ತಾಲೂಕಿನ 5 ಶಾಲೆಗಳಿಗೆ ವಿಜ್ಞಾನ ಪ್ರಯೋಗದ ಉಪಕರಣಗಳ ಜೊತೆಗೆ ಪೀಠೋಪಕರಣಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತ ಹುನೂರ ರವರು ಶಾಲೆಗಳಿಗೆ ಹಸ್ತಾಂತರ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತ ಹುನೂರ ಮಾತನಾಡಿ, ವಿಜ್ಞಾನ ವಿಷಯಗಳ ಕಲಿಕೆಯಲ್ಲಿ ಆಸಕ್ತಿಯನ್ನು ಬೆಳೆಸುವುದು ಮತ್ತು ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವಲ್ಲಿ ಈ ವಿಜ್ಞಾನ ಪ್ರಯೋಗದ ಉಪಕರಣಗಳ ಕೊಡುಗೆ ಮಹತ್ತರ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಗುರುಸಂಗಯ್ಯ ಗಣಾಚಾರಿ ಮಾತನಾಡಿ, ವಿಜ್ಞಾನ ಉಪಕರಣಗಳು ಸರ್ಕಾರಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನವನ್ನು ಒದಗಿಸಲು ನೆರವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಹಟ್ಟಿ ವಲಯದ ಶಿಕ್ಷಣ ಸಂಯೋಜಕ ಬಸವರಾಜ ಕರಡಿ ಮಾತನಾಡಿ, ವಿಜ್ಞಾನ ಉಪಕರಣಗಳು ಅತ್ಯಮೂಲ್ಯ ಮತ್ತು ಅತ್ಯುಪಯುಕ್ತ ವಾಗಿದ್ದು ಈ ಉಪಕರಣಗಳನ್ನು ಸದ್ಬಳಕೆ ಮಾಡಿಕೊಂಡು ಮಕ್ಕಳಿಗೆ ಬೋಧನೆ ಮಾಡುವಂತೆ ಸೂಚಿಸಿದರು.

ಪ್ರಾಸ್ತವಿಕವಾಗಿ ಮಾತನಾಡಿದ ಜನತಾಪುರ ಶಾಲೆಯ ಶಿಕ್ಷಕ ಮೌನೇಶ್ ಎಂ ಮಾತನಾಡಿ, ಕೃತಗ್ಯತಾ ಟ್ರಸ್ಟ್ ಹಾಗೂ ಇದರ ಸ್ಥಾಪಕರಾದ ಶ್ರೀಮತಿ ಅರುಣಾ ದಿವಾಕರ್ ಮೇಡಂರವರು ಲಿಂಗಸೂಗೂರು ತಾಲೂಕಿಗೆ ಈ ಹಿಂದೆ 9 ಶಾಲೆಗಳಿಗೆ ವಿಜ್ಞಾನ ಉಪಕರಣಗಳನ್ನು ಕೊಡುಗೆ ನೀಡಿದ್ದು, ಮತ್ತೆ ಇದೀಗ ತಾಲೂಕಿನ 5 ಶಾಲೆಗಳಿಗೆ ಕೊಡುಗೆ ನೀಡಿರುವುದು ವಿದ್ಯಾರ್ಥಿಗಳ ವೈಜ್ಞಾನಿಕ ಜ್ಞಾನದ ಹೆಚ್ಚಳಕ್ಕೆ ಸಹಕಾರಿ ಆಗಲಿದೆ ಎಂದು ತಿಳಿಸಿದರು.

## ಜನ ಜಾಗೃತಿಯಿಂದ ರಾಜ್ಯದಲ್ಲಿ ಗರ್ಭಕಂಠ ಕ್ಯಾನ್ಸರ್ ಶೇ.16 ರಷ್ಟು ಇಳಿಕೆ

**ಬೆಂಗಳೂರು,ಜ.29–**ಕರ್ನಾಟಕ ರಾಜ್ಯದಲ್ಲಿ ಕ್ಯಾನ್ಸರ್ ಜಾಗೃತಿ ಅಭಿಯಾನದಡಿ ನಿಯಮಿತ ತಪಾಸಣೆ, ಆರಂಭಿಕ ಹಂತದಲ್ಲೇ ರೋಗ ಪತ್ತೆಯಂತಹ ಕ್ರಮಗಳಿಂದಾಗಿ ಮಹಿಳೆಯರಲ್ಲಿ ಗರ್ಭಕಂಠ ಕ್ಯಾನ್ಸರ್ ಇಳಿಕೆ ಪ್ರಮಾಣ ಶೇ. 16ರಷ್ಟಾಗಿದೆ ಎಂದು ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ನಿರ್ದೇಶಕ ಡಾ.ಟಿ.ನವೀನ್ ತಿಳಿಸಿದ್ದಾರೆ.

ರಾಜ್ಯದಲ್ಲಿ ಕಳೆದ ವರ್ಷ 89165 ಸಕ್ರಿಯ ಕ್ಯಾನ್ಸರ್ ಪ್ರಕರಣಗಳು ವರದಿಯಾಗಿವೆ.ಅವುಗಳಲ್ಲಿ ಶೇ.9 ರಷ್ಟು ಅಂದರೆ 4476 ಗರ್ಭಕಂಠ ಕ್ಯಾನ್ಸರ್ ಪ್ರಕರಣಗಳಾಗಿವೆ. ರಾಜ್ಯದಲ್ಲಿ 1980ರಲ್ಲಿ ಮಹಿಳೆಯರಲ್ಲಿ ವರದಿಯಾದ ಕ್ಯಾನ್ಸರ್ ಪ್ರಕರಣಗಳಲ್ಲಿ ಗರ್ಭಕಂಠ ಕ್ಯಾನ್ಸರ್ ಪ್ರಮಾಣ ಶೇ.40ರಷ್ಟಿತ್ತು ಮತ್ತು ಕಳೆದ ವರ್ಷ ಶೇ.16.2 ರಷ್ಟಿತ್ತು ಎಂದು ನಿರ್ದೇಶಕರು ವಿವರಿಸಿದ್ದಾರೆ.

ಗರ್ಭಕಂಠ ಕ್ಯಾನ್ಸರ್ ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿ ಸಕಾಲಿಕ ಚಿಕಿತ್ಸೆ ನೀಡಿ ಗುಣಪಡಿಸಬಹುದು. ಇದರ ತಡೆಗೆ ಹೆಚ್.ಪಿ.ವಿ.ಲಸಿಕೆ ಸಹಕಾರಿಯಾಗಿದ್ದು, ಆಯುಷ್ಮಾನ ಭಾರತ–ಆರೋಗ್ಯ ಕರ್ನಾಟಕ, ಕೆಸಿಎಂಎಂಆರ್ ಯೋಜನೆಯಡಿ ಚಿಕಿತ್ಸೆ ನೀಡಲಾಗುತ್ತಿದೆ. ಇದಲ್ಲದೆ ಇದರ ತಡೆಗೆ ಸಂಸ್ಥೆಯು ಸಮುದಾಯ ಸಂಪರ್ಕ, ಆರೋಗ್ಯ ಕಾರ್ಯಕರ್ತರ ತರಬೇತಿ, ಉಪನ್ಯಾಸ, ವಾಕ್ ಥಾನ್ ಮತ್ತು ಜಾಗೃತಿ ಅಭಿಯಾನ ನಡೆಸುತ್ತಿದೆ ಎಂದು ಹೇಳಿದ್ದಾರೆ. ಮಹಿಳೆಯರು ನಿಯಮಿತ ತಪಾಸಣೆಗೆ ಒಳಗಾಗಬೇಕು. ಗರ್ಭಕಂಠ ಕ್ಯಾನ್ಸರ್ ನಿಯಂತ್ರಣದಲ್ಲಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಪ್ರಮುಖ ಪಾತ್ರ ವಹಿಸುತ್ತಿದೆ. ಸರ್ಕಾರವು ಜಿಲ್ಲಾ ಆಸ್ಪತ್ರೆ, ವೈದ್ಯಕೀಯ ಕಾಲೇಜುಗಳು, ಪ್ರಾದೇಶಿಕ ಕೇಂದ್ರಗಳ ಮೂಲಕ ತಪಾಸಣೆ ಮತ್ತು ಚಿಕಿತ್ಸಾ ಪ್ರಮಾಣ ಹೆಚ್ಚಿಸಿದೆ.ರಾಜ್ಯದಾದ್ಯಂತ ಗರ್ಭಕಂಠ ಕ್ಯಾನ್ಸರ್ ನಿಯಂತ್ರಿಸಲು ಜಾಗೃತಿ ಅಭಿಯಾನದ ಮೂಲಕ ಶ್ರಮಿಸುತ್ತಿದೆ ಎಂದು ಡಾ. ನವೀನ್ ತಿಳಿಸಿದ್ದಾರೆ.

ಕ್ಯಾನ್ಸರದಿಂದ ಗೆದ್ದವರ ಸ್ಫೂರ್ತಿದಾಯಕ ಮಾಹಿತಿ ಮತ್ತು ಚಿಕಿತ್ಸೆ ಪಡೆಯುತ್ತಿರುವವರಿಗೆ ಆತ್ಮವಿಶ್ವಾಸ ತುಂಬುವ ನಿಟ್ಟಿನಲ್ಲಿ ಕ್ಯಾನ್ಸರ್ ಗೆದ್ದವರ ದಿನ ಆಚರಿಸಲಾಗುತ್ತಿದೆ ಮತ್ತು ಗರ್ಭಕಂಠ ಕ್ಯಾನ್ಸರ್ ತಪಾಸಣೆ ಮಾಡಲಾಗುತ್ತಿದೆ ಎಂದು ಸಂಸ್ಥೆಯ ಸ್ತ್ರೀ ಗಂಥಿಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಶೋಭಾ ತಿಳಿಸಿದ್ದಾರೆ.

# ಸಾಹಿತ್ಯ ರತ್ನ ಪ್ರಶಸ್ತಿಗೆ ಆಂಜನಯ್ಯ ಭೋವಿ ಸುಂಕೇಶ್ವರ್ ಶಿಕ್ಷಕ ಆಯ್ಕೆ

ಯುವಮಾರ್ಗ ಸುದ್ದಿ



**ಮಾನ್ವಿ,ಜ.29–** ವಿಜಯನಗರ ಜಿಲ್ಲೆಯ ಕೊಟ್ಟೂರಿನ ಇಂದಿರಾ ಚಾರಿಟಬಲ್ ಅಂಡ್ ಎಜ್ಯುಕೇಷನಲ್ ಟ್ರಸ್ಟ್ (ರಿ.).
ಆಡಳಿತ ಮಂಡಳಿ ಅಧೀನದಲ್ಲಿ ನಡೆಯುತ್ತಿರುವ ಇಂದು ಪದವಿ ಪೂರ್ವ ಮಹಾವಿದ್ಯಾಲಯ 21ನೇ ವರ್ಷಕ್ಕೆ ಕಾಲಿಡುತ್ತಿರುವ ಸುಸಂದರ್ಭದಲ್ಲಿ ಕನ್ನಡ ಭಾಷಾ ವಿಷಯದ ಶಿಕ್ಷಕರಾಗಿ ಪ್ರೌಢಶಾಲೆಯಲ್ಲಿ ಗಣನೀಯ ಸೇವೆ ಸಲ್ಲಿಸಿ ಅತ್ಯುತ್ತಮ ಸಾಧನೆಗೈದ, ಸಾವಿರಾರು ವಿದ್ಯಾರ್ಥಿಗಳಿಗೆ ಭವಿಷ್ಯದ ಮಾರ್ಗದರ್ಶನ ತೋರಿದ ರಾಯಚೂರು ಜಿಲ್ಲಾ ಮಾನವಿ ತಾಲೂಕಿನ ಶ್ರೀ ವೆಂಕಟೇಶ್ವರ ಪ್ರೌಢ ಶಾಲೆಯ ಕನ್ನಡ ಭಾಷಾ ಶಿಕ್ಷಕರಾದ ಆಂಜನಯ್ಯ ಬೋವಿ ಸುಂಕೇಶ್ವರ ದಿನಾಂಕ 25–01–2026ರಂದು ಕೊಟ್ಟೂರಿನ ಇಂದು ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ನಡೆದ ಆಡಳಿತ ಮಂಡಳಿ ವತಿಯಿಂದ "ಸಾಹಿತ್ಯ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.ಸಂಸ್ಥೆಯ ಅಧ್ಯಕ್ಷರಾದ ಮಹಾಂತೇಶ್ ಓಲೇಕಾರ್ ಹಾಗೂ ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ

## ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ ತಾಲೂಕ ಘಟಕಕ್ಕೆ ಪ್ರಧಾನ ಕಾರ್ಯದರ್ಶಿಯಾಗಿ ಕೊಂಡಯ್ಯ ನಾಯಕ ಆಯ್ಕೆ.

ಯುವಮಾರ್ಗ ಸುದ್ದಿ



**ಮಾನ್ವಿ,ಜ.29–** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ರಿ) ರಾಯಚೂರು ಬಿ. ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರ ಆದೇಶದ ಮೇರೆಗೆ ಮಾನವಿ ತಾಲೂಕ ಘಟಕಕ್ಕೆ ತಾಲೂಕ ಪ್ರಧಾನ ಕಾರ್ಯದರ್ಶಿಯಾಗಿ ಕೊಂಡಯ್ಯ ನಾಯಕ ಬೆಳಗಿನಪೇಟೆ ಮಾನ್ವಿ ಇವರನ್ನು ತಾಲೂಕ ಪ್ರಧಾನ ಕಾರ್ಯದರ್ಶಿ ಎಂದು ನೇಮಕ ಮಾಡಿದ್ದು. ಕೂಡಲೇ ಸಂಘದ ಎಲ್ಲಾ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಶೈಕ್ಷಣಿಕ, ಆರ್ಥಿಕ, ಹಾಗೂ ಸಂಘಟನೆಯ ಬಲವರ್ಧನೆಗಾಗಿ ಶ್ರಮಿಸಲು ಈ ಮೂಲಕ ತಮಗೆ ಸೂಚಿಸಿ ಆದೇಶಿಸಿದೆ.ನಂತರ ತಾಲೂಕ ಪ್ರಧಾನ ಕಾರ್ಯದರ್ಶಿ ಯಾಗಿ ಆಯ್ಕೆಯಾದ ಕೊಂಡಯ್ಯ ನಾಯಕಗೆ ಅವರ ಅಭಿಮಾನಿ ಬಳಗ ಸನ್ಮಾನಿಸಿ ಗೌರವಸಿದರು.ಈ ಸಂದರ್ಭದಲ್ಲಿ ಗೋಪಾಲ ನಾಯಕ ಕರೆಡಿಗುಡ್ಡ, ನಾಯ್ಡು ನಾಯಕ,ವಿನೋದ ಕುಮಾರ, ಕೆ.ಸಾಜೀದ ಪಾಷ , ಬಸವರಾಜ ಸ್ವಾಮಿ, ಅಂಬು ನಾಯಕ, ಶಿವಾನಂದ ನಾಯಕ,ಯಲ್ಲಯ್ಯ ನಾಯಕ,ಶಂಕರ ನಾಯಕ,ದೇವರಾಜ ನಾಯಕ,ರಮೇಶ ನಾಯಕ, ಹನುಮೇಶ ನಾಯಕ,ಉಪೇಂದ್ರ ನಾಯಕ, ತಾಯಣ್ಣ ನಾಯಕ, ನರಸಿಂಹ ನಾಯಕ, ರಮೇಶ ನಾಯಕ, ಜಗದೀಶ, ಪಂಪಣ್ಣ ನಾಯಕ,ವಿರೇಶ ನಾಯಕ, ದೇವು ನಾಯಕ, ಮಂಜು ನಾಯಕ, ಈರಯ್ಯ ನಾಯಕ ಇತರರರು ಉಪಸ್ಥಿತರಿದ್ದರು

# ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಒಂದು ದಿನದ ಕಾರ್ಯಗಾರ



ಯುವಮಾರ್ಗ ಸುದ್ದಿ

**ಮಾನ್ವಿ,ಜ.29–**ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಭಾಂಗಣದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ , ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು, ಕೆ.ಎಸ್.ಎಂ.ಸಿ.ಎ. ಬೆಂಗಳೂರು ಮತ್ತು ಮಾನ್ವಿ ಕೈಗಾರಿಕಾ ಸಂಘದ ಸಂಯುಕ್ತಾಶ್ರಯದಲ್ಲಿ ಆರ್.ಎ.ಎಂ.ಪಿ ಯೋಜನೆ ಅಡಿಯಲ್ಲಿ ಬಿ.ಡಿ.ಎಸ್.ಎಂ.ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರಕ್ಕೆ ರಾಯಚೂರು ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕರಾದ ಬಿ.ಸತೀಶ್ ಕುಮಾರ್ ಚಾಲನೆ ನೀಡಿ ಮಾತನಾಡಿ ಜಿಲ್ಲಾ ಕೈಗಾರಿಕಾ ಕೇಂದ್ರವು ಜಿಲ್ಲೆಯಲ್ಲಿರುವ ವಿವಿಧ ಕೈಗಾರಿಕೆಗಳ ಅಭಿವೃದ್ಧಿ ಹಾಗೂ ಕೈಗಾರಿಕೆಗಳಲ್ಲಿ ಉತ್ಪದನೆಯನ್ನು ಹೆಚ್ಚಿಸುವುದು ಹಾಗೂ ಜಿಲ್ಲೇಯಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನವನ್ನು ನೀಡುವುದು ಯುವ ಕೈಗಾರಿಕೋದ್ಯಮಿಗಳಿಗೆ ಕೇಂದ್ರ ಮತ್ತುರಾಜ್ಯ ಸರ್ಕಾರದ ಯೋಜನೆಗಳ ಬಗ್ಗೆ ಪೂರಕ ತರಬೇತಿಯನ್ನು ನೀಡುವ ಕಾರ್ಯವನ್ನು ಮಾಡುತ್ತಿದೆ ಕೈಗಾರಿಕೆಗಳಿಗೆ ಸಂಭಂದಿಸಿದ ಅಗತ್ಯ ಮಾಹಿತಿಗಾಗಿ ಕೈಗಾರಿಕೋದ್ಯಮಿಗಳು ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು ರವರನ್ನು ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಯಾದಗಿರಿ ಗೌಟ್ ಪದವಿ ಮತ್ತು ಸ್ನಾತಕೋತ್ತರ ಕಾಲೇಜಿನ ಅಸೋಸಿಯೇಟ್ ಪ್ರೋಫೆಸರ್ ಹೆಚ್.ಓ.ಡಿ ಸಂಶೋಧಕರಾದ ಡಾ.ಬಸವಪ್ರಸಾದ್.ಬಿ. ಮಾತನಾಡಿ ನಮ್ಮಲ್ಲಿ ದೊರೆಯುವ ಸಂಪನ್ಮೂಲಗಳನ್ನು ಗುರುತಿಸಿ ಕೊಂಡಾಗ ಮಾತ್ರ ಕೈಗಾರಿಕೆಗಳನ್ನು ಸ್ಥಾಪಿಸುವುದಕ್ಕೆ ಸಾಧ್ಯವಾಗುತ್ತದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತ್ಯಂತ ಹಿಂದುಳಿದಿರುವ ಜಿಲ್ಲೆಗಳಲ್ಲಿ ರಾಯಚೂರು ಜಿಲ್ಲೇಯು ಇರುವುದರಿಂದ ಈ ಭಾಗದ ಅಭಿವೃದ್ದಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸಾಕಷ್ಟು ಯೋಜನೆಗಳನ್ನು ಜಾರಿ ಮಾಡುತ್ತಿವೆ. ಜಿಲ್ಲೆಯಲ್ಲಿ22.75 ಲಕ್ಷ ಜನಸಂಖ್ಯೆ ಇದ್ದು ಶೇ.70 ರಷ್ಟು ಜನರು ಕೃಷಿಯನ್ನೇ ಮುಖ್ಯ ವೃತ್ತಿಯಾಗಿ ಆಯ್ಕೆ ಮಾಡಿಕೊಂಡಿದ್ದು ನೀರಾವರಿ ಮತ್ತು ಅರೆ ನೀರಾವರಿ,ಮಳೆಯಾಶ್ರಯದಲ್ಲಿ ಭತ್ತ ಮತ್ತು ಹತ್ತಿ ,ಮೆಣಸಿನಕಾಯಿಯನ್ನು ಬೆಳೆಯಲಾಗುತ್ತಿದ್ದರು ಕೂಡ ಈ ಭಾಗದಲ್ಲಿ ದೊರೆಯುವ ಕೃಷಿ ಉತ್ಪನ್ನಗಳನ್ನು ಬಳಸಿಕೊಂಡು ಮೌಲ್ಯವರ್ಧನೆಗೊಳಿಸುವ ಪೂರಕ ಕೈಗಾರಿಕೆಗಳು ಶೇ15 ರಷ್ಟು ಮಾತ್ರ ಇವೆ, ಹತ್ತಿಯನ್ನು ಬಳಸಿಕೊಂಡು ಬಟ್ಟೆ ತಯಾರಿಸುವ ಕಾರ್ಖಾನೆಗಳನ್ನು ಪ್ರಾರಂಭಿಸಬಹುದು ಭತ್ತದ ಹೋಟ್ಟಿನಿಂದ ಖಾದ್ಯ ತೈಲವನ್ನು ತಯಾರಿಸುವ ಕಾರ್ಖಾನೆಗಳನ್ನು ಪ್ರಾರಂಭಿಸುವುದಕ್ಕೆ ಅವಕಾಶವಿದೆ. ಕೃಷಿ ತ್ಯಾಜ್ಯಗಳನ್ನು ಬಳಸಿಕೊಂಡು ಗೋಬ್ಬರ ತಾಯಾರಿಸುವುದಕ್ಕೆ ಕೂಡ ಉತ್ತಮ ಅವಕಾಶವಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ನೂತನ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವವರಿಗೆ ಅಗತ್ಯ ಆರ್ಥಿಕ ನೆರವಿನ ಜೊತೆಗೆ ಸಹಾಯಧನವನ್ನು ಕೂಡ ನೀಡಲಾಗುತ್ತದೆ ಮಾನ ಸಂಪನ್ಮೂಲ ಹೇರಳವಾಗಿದ್ದು, ರೈಲ್ವೆ,ವಿಮಾನ,ಹೆದ್ದಾರಿ,ರಸ್ತೆ, ಸಾರಿಗೆ ಸೌಲಭ್ಯ, ನೀರಿನ ಸೌಕರ್ಯ, ಕಡಿಮೆ ಬೆಲೆಗೆ ಭೂಮಿ, ವಿದ್ಯುತ್ ಸೌಕರ್ಯವಿದ್ದು ಹೆಚ್ಚಿನ ಯುವ ಸಮುದಾಯ ಸೂಕ್ಷ್ಮ,ಸಣ್ಣ,ಮಾಧ್ಯಮ, ಕೈಗಾರಿಕೆಗಳ ಸ್ಥಾಪನೆಗೆ ಮುಂದಾದಾಗ ಮಾತ್ರ ಈ ಭಾಗದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಚಾರ್ಟಅಕೌಂಟೆಂಟ್ ,ಎಂ.ಎಸ್.ಎಂ.ಇ. ಮತ್ತು ಅನುಸರಣಿ ತಜ್ಞರು ಉಪನ್ಯಾಸಕರು,ತರಬೇತಿದಾರರಾದ ಎಸ್. ಡಿ.ಪ್ರಸಾದ್ ವೀರಪನೇನಿ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ಕೈಗಾರಿಕೋದ್ಯಮಿಗಳಾದ ಅಲ್ದಾಳ್ ವೀರಭದ್ರಪ್ಪ ಗೌಡ , ಜಿಲ್ಲಾ ಕೈಗಾರಿಕಾ ಕೇಂದ್ರ ಸಹಾ ನಿರ್ದೇಶಕರಾದ ಲಕ್ಷ್ಮೀ ಕಾಂತ್ ಕುಲಕರ್ಣಿ, ಉಪ ನಿರ್ದೇಶಕರಾದ ರಾಜ್ ಕುಮಾರ್ ಪಾಟೀಲ್, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳಾದ ರಂಗನಾಥ ದೇಸಾಯಿ, ಶಂಕರ್ ಹೈಟೆಕ್ ಇಂಡಸ್ಟ್ರೀಸ್ ಮಾನ್ವಿಯ ಆರ್.ರಾಘವೇಂದ್ರಶೆಟ್ಟಿ, ಎಸ್.ಬಿ.ಐ, ಕೃಷಿ ಶಾಖೆಯ ವ್ಯವಸ್ಥಾಪಕರಾದ ಯಲ್ಲಪ್ಪ ಸೇರಿದಂತೆ ತಾಲೂಕಿನ ಕೈಗಾರಿಕೋದ್ಯಮಿಗಳು ಭಾಗವಹಿಸಿದರು.

## ಕಾರು ಡಿಕ್ಕಿ ಹೊಡೆದು ವ್ಯಕ್ತಿ ಸಾವು: ಆರೋಪಿಗೆ ಶಿಕ್ಷೆ

ಕಲಬುರಗಿ,ಜ.29–ಕಾರು ಡಿಕ್ಕಿ ಹೊಡೆದು ವ್ಯಕ್ತಿಯೊಬ್ಬನ ಸಾವಿಗೆ ಕಾರಣನಾದ ಆರೋಪಿಗೆ ಇಲ್ಲಿನ 3ನೇ ಜೆ.ಎಂ.ಎಫ್.ಸಿ.ನ್ಯಾಯಾಲಯ 1 ಸಾವಿರ ರೂ.ದಂಡ ಮತ್ತು 6 ತಿಂಗಳ ಶಿಕ್ಷೆ ವಿಧಿಸಿದೆ.


2023ರಲ್ಲಿ ನಂದೂರ (ಕೆ) ಹತ್ತಿರ ಕಾರು ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡು ಲಕ್ಷ್ಮಣ ಎಂಬಾತ ಮೃತಪಟ್ಟಿದ್ದ. ಈ ಸಂಬಂಧ ಆರೋಪಿ ಬಸವರಾಜ ಮರಗೋಳ ವಿರುದ್ಧ ಪ್ರಕರಣ ದಾಖಲಾಗಿತ್ತು.ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಅಧಿಕಾರಿಗಳಾದ ಗೋಪಾಲ ಆರ್.ರಾಠೋಡ್ ಮತ್ತು ಬಸವರಾಜ ತೇಲಿ ಅವರು ಪ್ರಕರಣದ ತನಿಖೆ ನಡೆಸಿ ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಕಲಬುರಗಿಯ 3ನೇ ಜೆ.ಎಂ.ಎಫ್.ಸಿ.ನ್ಯಾಯಾಲಯದ ನ್ಯಾಯಾಧೀಶರಾದ ಲಲೀತಾ ಕುದರಿಮತಿ ಅವರು ವಾದ–ವಿವಾದಗಳನ್ನು ಆಲಿಸಿ ಆರೋಪಿ ಬಸವರಾಜ ಮರಗೋಳಗೆ 1 ಸಾವಿರ ರೂ.ದಂಡ ಹಾಗೂ 6 ತಿಂಗಳ ಶಿಕ್ಷೆ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕರಾದ ಶಿವಶರಣಪ್ಪ ಹೋತಪೇಟ ಅವರು ವಾದ ಮಂಡಿಸಿದ್ದರು.

# ದೇಶದ ಆರ್ಥಿಕತೆ ಶೇ. 7.2 ಏರಿಕೆ ನಿರೀಕ್ಷೆ ಆರ್ಥಿಕ ಸಮೀಕ್ಷೆ ಮಂಡನೆ

**ನವದೆಹಲಿ,ಜ. 29–** 2026–27ರಲ್ಲಿ ದೇಶದ ಆರ್ಥಿಕತೆ ಶೇಕಡಾ 6.8 ರಿಂದ –7.2 ರಷ್ಟು ಏರಿಕೆ ನಿರೀಕ್ಷೆ ಇದೆ ಆರ್ಥಿಕ ಸಮೀಕ್ಷೆ ಅಂದಾಜು ಮಾಡಿದೆ

ಆರ್ಥಿಕ ಸ್ಥಿತಿಯ ಕುರಿತಾದ ವರದಿಯನ್ನು ಮುಖ್ಯ ಆರ್ಥಿಕ ಸಲಹೆಗಾರ ವಿ ಅನಂತ ನಾಗೇಶ್ವರನ್ ಮತ್ತು ಅವರ ತಂಡ ಸಿದ್ದ ಪಡಿಸಿದೆ ಫಬ್ರವರಿ 1 ರಂದು ಬಜೆಟ್ ಮಂಡನೆಗೂ ಮುನ್ನ ಈ ವರದಿ ಹೊರಬಿದ್ದಿದೆ
ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2025–2026ರ ಭಾರತದ ಆರ್ಥಿಕ ಸಮೀಕ್ಷೆಯನ್ನು ಲೋಕಸಭೆಯಲ್ಲಿ ಮಂಡಿಸಿದ್ದು ಅದರಲ್ಲಿ ಈ ವಿಷಯ ತಿಳಿಸಿದ್ದಾರೆ.ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಲೋಕಸಭೆಯಲ್ಲಿ 2025–2026ರ ಭಾರತದ ಆರ್ಥಿಕ ಸಮೀಕ್ಷೆಯನ್ನು ಮಂಡಿಸಿದರು.

ವಾರ್ಷಿಕ ಆರ್ಥಿಕ ಸಮೀಕ್ಷೆಯ ಪ್ರಕಾರ, ದೇಶೀಯ ಆರ್ಥಿಕತೆಯು ಸ್ಥಿರವಾದ ನೆಲೆಯಲ್ಲಿ ಉಳಿದಿದೆ ಆದರೆ ವ್ಯಾಪಾರ ಪಾಲುದಾರರಲ್ಲಿ ನಿಧಾನಗತಿಯ ಬೆಳವಣಿಗೆ ಮತ್ತು ವ್ಯಾಪಾರಕ್ಕೆ ಸುಂಕ–ಪ್ರೇರಿತ ಅಡಚಣೆಗಳು ರಫ್ತು ಮತ್ತು ಹೂಡಿಕೆದಾರರ ಭಾವನೆಗಳ ಮೇಲೆ ಪರಿಣಾಮ ಬೀರಬಹುದು ಎಂದು ಹೇಳಿದ್ದಾರೆ ಕಳೆದ ವರ್ಷದ ಸಮೀಕ್ಷೆಯ ಶೇ. 6.3–6.8ರ ಮುನ್ಸೂಚನೆ ಮೀರಿ, ಈ ಹಣಕಾಸು ವರ್ಷದ ಬೆಳವಣಿಗೆ ದರವನ್ನು ಸರ್ಕಾರ ಶೇ. 7.4ಕ್ಕೆ ದಾಖಲಿಸಿದೆ ಎಂದಿದ್ದಾರೆ.



ವೇಗದ ಬೆಳವಣಿಗೆ ಮತ್ತು ಕಡಿಮೆ ಹಣದುಬ್ಬರದ ಹೊರತಾಗಿಯೂ, 2025 ರಲ್ಲಿ ದಾಖಲೆಯ ಹೊರಹರಿವಿನ ನಂತರ ವಿದೇಶಿ ಹೂಡಿಕೆದಾರರು ಭಾರತೀಯ ಷೇರುಗಳನ್ನು ಮಾರಾಟ ಮಾಡುವುದನ್ನು ಮುಂದುವರೆಸಿದ್ದಾರೆ. ಮೌಲ್ಯಮಾಪನಗಳು, ಕಡಿಮೆಯಾದ ಗಳಿಕೆಗಳು ಮತ್ತು ಭೌಗೋಳಿಕ ರಾಜಕೀಯ ಕಳವಳಕ್ಕೆ ಕಾರಣವಾಗಿದೆ.ಕಳೆದ ವರ್ಷ ಆಗಸ್ಟ್‌ನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆಲವು ಭಾರತೀಯ ಸರಕುಗಳ ಮೇಲೆ ಶೇ.50 ರಷ್ಟು ಸುಂಕ ವಿಧಿಸಿದ ನಡುವೆ ಉತ್ತಮ ಆರ್ಥಿಕ ಬೆಳವಣಿಗೆ ದಾಖಲಿಸುವ ಉದ್ದೇಶ ಹೊಂದಿದೆ

ಭಾರತ ಮತ್ತು ಯುರೋಪಿಯನ್ ಒಕ್ಕೂಟವು ದ್ವಿಮುಖ ವ್ಯಾಪಾರವನ್ನು ಹೆಚ್ಚಿಸುವ ಮತ್ತು ಅಮೆರಿಕದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿರುವ ಹೆಚ್ಚಿನ ಸರಕುಗಳ ಮೇಲಿನ ಸುಂಕವನ್ನು ಕಡಿತಗೊಳಿಸುವ ಒಪ್ಪಂದಕ್ಕೆ ಬಂದಿರುವುದು ಕೂಡ ಪೂತವಾಗಿದೆ.

# ಕಳೆದ ಜನವರಿಯಲ್ಲಿ ಪಡಿತರ ಅಕ್ಕಿ ಹಣ ಜಮಾ ಮಾಡಿಲ್ಲ : ಸಚಿವ ಕೆ.ಎಚ್.ಮುನಿಯಪ್ಪ

**ಬೆಂಗಳೂರು,ಜ.29–** ಕಳೆದ 2025 ರ ಜನವರಿ ತಿಂಗಳಲ್ಲಿ ರಾಜ್ಯಸರ್ಕಾರದಿಂದ ಪಡಿತರ ಚೀಟಿದಾರರಿಗೆ ಹಣ ಜಮಾ ಮಾಡಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ವಿಧಾನಸಭೆಗೆ ಇಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಮಹೇಶ್ ಟೆಂಗಿನಕಾಯಿ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆ ತಿಂಗಳಿನಲ್ಲಿ ರಾಜ್ಯಸರ್ಕಾರದ ಅಕ್ಕಿಯನ್ನೂ ನೀಡಿಲ್ಲ. ಹಣಕಾಸು ಇಲಾಖೆಯಿಂದ ನಮ ಇಲಾಖೆ ಆ ತಿಂಗಳ ಹಣವನ್ನೂ ಪಡೆದಿಲ್ಲ ಎಂದು ಹೇಳಿದರು.ಕೇಂದ್ರ ಸರ್ಕಾರದ ಆದೇಶವನ್ನು ಪಾಲನೆ ಮಾಡಿದ್ದರಿಂದ ಈ ರೀತಿ ಆಗಿದೆ ಎಂದು ಸ್ಪಷ್ಟನೆ ನೀಡಿದರು.ನಮ ಸರ್ಕಾರ ಅಧಿಕಾರಕ್ಕೆ ಬಂದಾಗ ಮುಕ್ತ ಮಾರುಕಟ್ಟೆಯಲ್ಲಿ ಅಕ್ಕಿ ಕೊಡುವುದಾಗಿ ಕೇಂದ್ರ ಸರ್ಕಾರ ಭರವಸೆ ನೀಡಿತ್ತು. ಸಾಕಷ್ಟು ದಾಸ್ತಾನು ಇತ್ತು. ಕೇಂದ್ರ ಸರ್ಕಾರ ಪ್ರತಿ ಫಲಾನುಭವಿಗೆ 5 ಕೆಜಿ ಅಕ್ಕಿ ನೀಡುತ್ತಿತ್ತು. ಜೊತೆಗೆ ರಾಜ್ಯಸರ್ಕಾರವೂ 5 ಕೆಜಿ ಅಕ್ಕಿ ಕೊಡುವುದಾಗಿ ಭರವಸೆ ನೀಡಿತ್ತು. ಆದರೆ 2–3 ತಿಂಗಳು ಕಳೆದರೂ ಕೇಂದ್ರ ಸರ್ಕಾರ ಅಕ್ಕಿ ಕೊಡಲಿಲ್ಲ.

ಹೀಗಾಗಿ ಪ್ರತಿ ಫಲಾನುಭವಿಗೆ ಮಾಸಿಕ 170 ರೂ.ಗಳಂತೆ 2023 ರ ಜುಲೈನಿಂದ 2024–25 ರವರೆಗೆ ಡಿಬಿಟಿ ಮೂಲಕ ನೇರವಾಗಿ ಹಣವನ್ನು ಫಲಾನುಭವಿಗಳ ಖಾತೆಗೆ ಜಮಾ



ಮಾಡಲಾಗುತ್ತಿತ್ತು ಎಂದರು. 2025ರ ಜ. 17 ರಂದು ಕೇಂದ್ರ ಸರ್ಕಾರ ಅಕ್ಕಿ ಕೊಡುವುದಾಗಿ ಹೇಳಿತ್ತು. ಕೇಂದ್ರ ಸರ್ಕಾರದಿಂದ ಪತ್ರ ವ್ಯವಹಾರ ಮಾಡುವಷ್ಟರಲ್ಲಿ ಫೆಬ್ರವರಿ ತಿಂಗಳು ಬಂದುಬಿಟ್ಟಿತ್ತು. ಹೀಗಾಗಿ ಮಾರ್ಚ್‌ನಲ್ಲಿ 15 ಕೆಜಿ ಅಕ್ಕಿ ಕೊಟ್ಟಿದ್ದೇವೆ ಎಂದು ವಿವರಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಮಹೇಶ್ ಟೆಂಗಿನಕಾಯಿ, 2025 ರ ಜನವರಿ ತಿಂಗಳ ಹಣವನ್ನು ಫಲಾನುಭವಿಗಳಿಗೆ ನೀಡಿಲ್ಲ. 657 ಕೋಟಿ ರೂ. ಏನಾಯಿತು?, ಏಕೆ ಕೊಡಲಿಲ್ಲ? ಎಂದು ಪ್ರಶ್ನಿಸಿದರು.ಆ ತಿಂಗಳ ಹಣವನ್ನೆ? ರಾಜ್ಯಸರ್ಕಾರ ಬಳಕೆ ಮಾಡಿಲ್ಲ ಎಂದು ಸಚಿವರು ಸ್ಪಷ್ಟನೆ ನೀಡಿದರು.

# 1,000 ಕೋಟಿ ರೂ. ಬ್ಯಾಂಕ್ ವಂಚನೆ ಪ್ರಕರಣ : ಹಲವು ಸ್ಥಳಗಳಲ್ಲಿ ಸಿಬಿಐ ದಾಳಿ

**ಕೋಲ್ಕತ್ತಾ, ಜ.29–** ಸುಮಾರು 1,000 ಕೋಟಿ ರೂ. ಬ್ಯಾಂಕ್ ವಂಚನೆ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಇಂದು ಇಲ್ಲಿನ ಹಲವು ಸ್ಥಳಗಳಲ್ಲಿ ಕಾರ್ಯಾಚರಣೆ ಆರಂಭಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕೋಲ್ಕತ್ತಾ ಮೂಲದ ಹಣಕಾಸು ಕಂಪನಿಯ ಪ್ರವರ್ತಕರ ಕಚೇರಿಗಳು ಮತ್ತು ನಿವಾಸಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿ ಶೋಧ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು. ದಾಳಿ ನಡೆಯುತ್ತಿರುವ ಸ್ಥಳಗಳಲ್ಲಿ ಹೆಚ್ಚುವರಿ ಕೇಂದ್ರ ಪಡೆಗಳನ್ನು ನಿಯೋಜಿಸಲಾಗಿದೆ ಎಂದು ಅವರು ಹೇಳಿದರು.

ಸಾರ್ವಜನಿಕ ವಲಯದ ಸಾಲದಾತನೊಬ್ಬನನ್ನು ಒಳಗೊಂಡ ದೊಡ್ಡ ಪ್ರಮಾಣದ ಬ್ಯಾಂಕ್ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅಲಿಪೋರ್ ಸೇರಿದಂತೆ ಹಲವಾರು ಸ್ಥಳಗಳಲ್ಲಿ ಶೋಧ ನಡೆಸಲಾಗುತ್ತಿದೆ ಎಂದು ಸಿಬಿಐ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪೂರ್ವ ಕೋಲ್ಕತ್ತಾ ಮೂಲದ ಹಣಕಾಸು ಕಂಪನಿಯೊಂದು ಸಾಲ ಪಡೆಯುವ ನೆಪದಲ್ಲಿ ಹಣವನ್ನು ವಂಚಿಸಿದೆ ಎಂದು ಬ್ಯಾಂಕ್ ಆರೋಪಿಸಿತ್ತು, ನಂತರ ಕೇಂದ್ರ ಸಂಸ್ಥೆ ತನಿಖೆ ಆರಂಭಿಸಿತು. 2014 ಮತ್ತು 2020 ರ ನಡುವೆ ಹಣದ ದುರುಪಯೋಗ ನಡೆದಿದೆ ಎಂದು ಸಿಬಿಐ ಅಧಿಕಾರಿ ತಿಳಿಸಿದ್ದಾರೆ.

ಮುಖ್ಯ ಆರೋಪಗಳು ಹಣಕಾಸು ಕಂಪನಿಯ ಇಬ್ಬರು ನಿರ್ದೇಶಕರು ಮತ್ತು ಅದರ ಸಹವರ್ತಿ ಸಂಸ್ಥೆಗಳಲ್ಲಿ ಒಂದು ಎಂದು ಹೇಳಿದರು.ಎರಡೂ ಸಂಸ್ಥೆಗಳು ಸಾಲಕ್ಕಾಗಿ ಸಾರ್ವಜನಿಕ ವಲಯದ ಬ್ಯಾಂಕನ್ನು ಸಂಪರ್ಕಿಸಿದ್ದವು ಮತ್ತು ಅವರ ಅರ್ಜಿಗಳಿಗೆ ಬೆಂಬಲವಾಗಿ ದಾಖಲೆಗಳನ್ನು ಸಲ್ಲಿಸಿದ್ದವು.



ಆರಂಭದಲ್ಲಿ ಒಂದು ಕಂಪನಿಯು 730.82 ಕೋಟಿ ರೂ. ಮುಂಗಡವನ್ನು ಪಡೆದುಕೊಂಡಿದ್ದರೆ, ಸಹಾಯಕ ಸಂಸ್ಥೆಯು 260.20 ಕೋಟಿ ರೂ. ಸಾಲವನ್ನು ಪಡೆದುಕೊಂಡಿತ್ತು ಎಂದು ಸಿಬಿಐ ಅಧಿಕಾರಿ ಹೇಳಿದರು.ಹೆಚ್ಚುವರಿ ಸಾಲಗಳನ್ನು ಹಂತ ಹಂತವಾಗಿ ಮಂಜೂರು ಮಾಡಲಾಯಿತು. ಆದಾಗ್ಯೂ, ಎರಡೂ ಕಂಪನಿಗಳು ಸಾಲ ಒಪ್ಪಂದವನ್ನು ಉಲ್ಲಂಘಿಸುತ್ತಿವೆ ಮತ್ತು ಕಂತುಗಳ ಸಕಾಲಿಕ ಮರುಪಾವತಿಯಲ್ಲಿ ವಿಫಲವಾಗಿವೆ ಎಂದು ಬ್ಯಾಂಕ್ ಆರೋಪಿಸಿದೆ.

ಪ್ರಾಥಮಿಕ ವಿಚಾರಣೆಯ ನಂತರ, ಎರಡೂ ಕಂಪನಿಗಳು ಕನಿಷ್ಠ ಆರು ಇತರ ಬ್ಯಾಂಕ್‌ಗಳಿಂದ ಹಲವಾರು ಸಾವಿರ ಕೋಟಿ ರೂಪಾಯಿಗಳ ಸಾಲವನ್ನು ಪಡೆದಿವೆ, ಅದರಲ್ಲಿ ಗಮನಾರ್ಹ ಭಾಗವನ್ನು ಮರುಪಾವತಿಸಲಾಗಿಲ್ಲ ಎಂದು ಸಿಬಿಐ ಆರೋಪಿಸಿದೆ.

2023 ರಲ್ಲಿ, ಸಂಬಂಧಪಟ್ಟ ಸಾರ್ವಜನಿಕ ವಲಯದ ಬ್ಯಾಂಕಿನ ಇಬ್ಬರು ಹಿರಿಯ ಅಧಿಕಾರಿಗಳು 1,000 ಕೋಟಿ ರೂ. ವಂಚನೆಗೆ ಸಂಬಂಧಿಸಿದಂತೆ ಸಿಬಿಐಗೆ ಔಪಚಾರಿಕ ದೂರು ಸಲ್ಲಿಸಿದರು. ಸಿಬಿಐ ನಂತರ ಎರಡೂ ಕಂಪನಿಗಳು ಮತ್ತು ಅವುಗಳ ಪ್ರವರ್ತಕರ ವಿರುದ್ಧ ಪ್ರಕರಣ ದಾಖಲಿಸಿದೆ ಎಂದು ಅಧಿಕಾರಿ ಹೇಳಿದರು.

# ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಐದು ಶಾಲೆಗಳಿಗೆ ಬಾಂಬ್ ಬೆದರಿಕೆ

**ನವದೆಹಲಿ, ಜ.29–** ರಾಷ್ಟ್ರ ರಾಜಧಾನಿಯಲ್ಲಿ ಇಂದು ಬೆಳಿಗ್ಗೆ ಐದು ಶಾಲೆಗಳಿಗೆ ಬಾಂಬ್ ಬೆದರಿಕೆಗಳು ಬಂದಿದ್ದು,ಭದ್ರತಾ ಸಂಸ್ಥೆಗಳು ಶೋಧ ನಡೆಸಿವೆ. ದೆಹಲಿ ಕಂಟೋನೆಂಟ್‌ನಲ್ಲಿರುವ ಲೊರೆಟೊ ಕಾನ್ವೆಂಟ್, ಚಿತ್ತರಂಜನ್ ಪಾರ್ಕ್ ನಲ್ಲಿರುವ ಡಾನ್ ಬಾಸ್ಕೊ ಮತ್ತು ಆನಂದ್ ನಿಕೇತನ ಮತ್ತು ದ್ವಾರಕಾದಲ್ಲಿರುವ ಕಾರ್ಮೆಲ್ ಕಾನ್ವೆಂಟ್ ಕ್ಯಾಂಪಸ್‌ಗಳಿಗೆ ಬೆದರಿಕೆಗಳು ಬಂದಿವೆ ಎಂದು ದೆಹಲಿ ಅಗ್ನಿಶಾಮಕ ಸೇವೆಗಳು ದೃಢಪಡಿಸಿವೆ.

ಮತ್ತೊಂದೆಡೆ, ಲೋಧಿ ಎಸ್ಟೇಟ್‌ನಲ್ಲಿರುವ ಸರ್ದಾರ್ ಪಟೇಲ್ ವಿದ್ಯಾಲಯವು ತನ್ನ ವಿದ್ಯಾರ್ಥಿಗಳ ಪೋಷಕರಿಗೆ ಭದ್ರತಾ ಬೆದರಿಕೆಯ ಬಗ್ಗೆ ಸಂದೇಶವನ್ನು ಕಳುಹಿಸಿದೆ. ಪೊಲೀಸ್ ಮತ್ತು ಅಗ್ನಿಶಾಮಕ ಅಧಿಕಾರಿಗಳಿಗೆ ತಕ್ಷಣವೇ ತಿಳಿಸಲಾಯಿತು, ಸ್ಥಳಾಂತರಿಸುವ ಪ್ರೊಟೋಕಾಲ್‌ಗಳು ಮತ್ತು ವಿಧ್ವಂಸಕ ವಿರೋಧಿ ತಪಾಸಣೆಗಳನ್ನು ಪ್ರಾರಂಭಿಸಲಾಯಿತು. ನಮ್ಮ ತಂಡಗಳು ಸ್ಥಳದಲ್ಲಿವೆ ಮತ್ತು ಪ್ರಮಾಣಿತ ಕಾರ್ಯಾಚರಣಾ ಕಾರ್ಯ ವಿಧಾನಗಳನ್ನು ಅನುಸರಿಸಲಾಗುತ್ತಿದೆ. ಇಲ್ಲಿಯವರೆಗೆ ಯಾವುದೇ ಅನುಮಾನಾಸ್ಪದ ವಸ್ತುಗಳು ಕಂಡುಬಂದಿಲ್ಲ ಎಂದು ಡಿಎಫ್‌ಎಸ್ ಅಧಿಕಾರಿಯೊಬ್ಬರು ಹೇಳಿದರು, ಶೋಧ ಕಾರ್ಯಾಚರಣೆಗಳು ನಡೆಯುತ್ತಿವೆ ಎಂದು ಹೇಳಿದರು. ಸರ್ದಾರ್ ಪಟೇಲ್ ವಿದ್ಯಾಲಯ ಆಡಳಿತವು ಬೆಳಿಗ್ಗೆ ಭದ್ರತಾ ಬೆದರಿಕೆ ಬಂದಿದೆ ಎಂದು ಪೋಷಕರಿಗೆ ತಿಳಿಸಿತು ಮತ್ತು ಅಧಿಕಾರಿಗಳಿಗೆ ತಕ್ಷಣ ಎಚ್ಚರಿಕೆ ನೀಡಲಾಯಿತು. ಬಾಂಬ್ ಸ್ಕ್ವಾಡ್ ತಂಡವು ಇಡೀ ಕ್ಯಾಂಪಸ್‌ನ ಸಂಪೂರ್ಣ ಪರಿಶೀಲನೆ ನಡೆಸಿದೆ ಎಂದು ಶಾಲೆ ತಿಳಿಸಿದೆ.

ಸ್ಥಳೀಯ ಪೊಲೀಸ್ ಸಿಬ್ಬಂದಿ, ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನ ದಳಗಳನ್ನು ಕ್ಯಾಂಪಸ್‌ಗಳನ್ನು ಸ್ವಚ್ಛಗೊಳಿಸಲು ನಿಯೋಜಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಕೆಲವು ಶಾಲೆಗಳಲ್ಲಿ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಅವರು ಹೇಳಿದರು. ಬೆದರಿಕೆಗಳ ಮೂಲವನ್ನು ಪತ್ತೆಹಚ್ಚಲು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಕಳ್ಳತನ, ಸುಲಿಗೆ ಪ್ರಕರಣ; 7 ಮಂದಿ ಆರೋಪಿಗಳ ಬಂಧನ

**ಕಲಬುರಗಿ,ಜ.29–**ಜಿಲ್ಲೆಯ ವಾಡಿ, ಚಿತ್ತಾಪುರ ಹಾಗೂ ಕಮಲಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ವಿವಿಧ ಕಳ್ಳತನ ಹಾಗೂ ಸುಲಿಗೆ ಪ್ರಕರಣಗಳಿಗೆ ಸಂಬಂಧಿಸಿದಂತೆ 5 ಪ್ರಕರಣಗಳನ್ನು ಭೇದಿಸಿರುವ ಜಿಲ್ಲಾ ಪೊಲೀಸರು 7 ಆರೋಪಿಗಳನ್ನು ಬಂಧಿಸಿ, ಅವರಿಂದ ಚಿನ್ನಾಭರಣ, ನಗದು ಹಾಗೂ ಬೈಕ್‌ಗಳನ್ನು ಜಪ್ತಿ ಮಾಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸುಲು ತಿಳಿಸಿದರು.
ನಗರದ ಜಿಲ್ಲಾ ಪೊಲೀಸ್ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಮಲಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಹೋಂಡಾ ಶೈನ್ ಬೈಕ್ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲೂಕಿನ ಕನಕಟ್ಟಾ ಗ್ರಾಮದ ನಿವಾಸಿ ಆನಂದ ಭಜಂತ್ರಿ ಎಂಬಾತನನ್ನು ಬಂಧಿಸಲಾಗಿದ್ದು, ಆತನಿಂದ 5 ಮೋಟಾರಾಸೈಕಲ್‌ಗಳನ್ನು ವಶಕ್ಕೆ ಪಡೆದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದರು. ಈ ಪ್ರಕರಣದ ತನಿಖೆಯನ್ನು ಗ್ರಾಮೀಣ ಡಿವೈಎಸ್ಪಿ ಲೋಕೇಶ್ವರಪ್ಪ, ಸಿಪಿಐ ಶಿವಶಂಕರ್ ಸಾಹು, ಪಿಎಸ್‌ಐ ಚೇತನ ನೇತೃತ್ವದ ತಂಡ ನಡೆಸಿತು.ಇದೇ ಠಾಣಾ ವ್ಯಾಪ್ತಿಯ ಕಲ್ಮೂಡ ಗ್ರಾಮದ ದತ್ತ ದಿಗಂಬರ ದೇವಸ್ಥಾನದ ಹುಂಡಿ ಒಡೆದು ಕಳ್ಳತನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಣಿಕ್ ತಳವಾರ, ಗುರುರಾಜ್ ಕೊಡಂಬಲ ಹಾಗೂ ಶ್ರೀಕಾಂತ್ ತಳವಾರ ಎಂಬವರನ್ನು ಬಂಧಿಸಿ, 5,350 ರೂ.ನಗದು ಹಣ ಜಪ್ತಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಿವರಿಸಿದರು.
ಚಿತ್ತಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಶರಣಬಸವೇಶ್ವರ ದೇವಸ್ಥಾನ ಹುಂಡಿ ಹಾಗೂ ಕೊತ್ತಲಾಪುರ ಯಲ್ಲಮ್ಮ ದೇವಸ್ಥಾನದ ಬೆಳ್ಳಿ ಸಾಮಾನು ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಳಗಿ ತಾಲೂಕಿನ ಇಂಗನಕಲ್ ಗ್ರಾಮದ ರಾಜು ಸಂಗಣ್ಣ ತಳವಾರ (20) ಮತ್ತು ಸಾಬಣ್ಣ ಕದ್ದರಗಿ (26) ಅವರನ್ನು ಬಂಧಿಸಲಾಗಿದೆ. ಕಳ್ಳತನದ ಸಾಮಾನು ಮಾರಾಟದಿಂದ ಬಂದ 4,300 ರೂ. ನಗದು ಹಣವನ್ನು ಜಪ್ತಿ ಮಾಡಲಾಗಿದೆ ಎಂದು ತಿಳಿಸಿದರು.
ವಾಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಾರಾಯಿ ಅಂಗಡಿಯಲ್ಲಿ ಸುಲಿಗೆ ನಡೆದಿದೆ ಎಂದು ಸುಳ್ಳು ಪ್ರಕರಣ ಸೃಷ್ಟಿಸಿದ್ದ ಅಂಗಡಿ ಕೆಲಸಗಾರ ಬಾಪುಗೌಡ ನಾಗರೆಡ್ಡಿ ನಾಚವಾರ (29) ಎಂಬಾತನನ್ನು ಬಂಧಿಸಲಾಗಿದೆ. ಆತನಿಂದ 5,54,605 ನಗದು ಹಣ ಹಾಗೂ ಕೃತ್ಯಕ್ಕೆ ಬಳಸಿದ ಬೈಕ್ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದರು.
ಸುದ್ದಿಗೋಷ್ಠಿಯಲ್ಲಿ ಗ್ರಾಮೀಣ ಉಪವಿಭಾಗದ ಡಿವೈಎಸ್ಪಿ ಲೋಕೇಶ್ವರಪ್ಪ, ಶಹಬಾದ ಡಿವೈಎಸ್ಪಿ ಶಂಕರಗೌಡ ಪಾಟೀಲ್, ಸಿಪಿಐ ಶಿವಶಂಕರ್ ಸಾಹು, ಪಿ.ಎಸ್. ವನಂಜಕರ, ಪಿಎಸ್‌ಐ ತಿರುಮಲೇಶ್ ಸೇರಿದಂತೆ ವಿವಿಧ ಠಾಣೆಗಳ ಪಿಎಸ್‌ಐಗಳು ಹಾಗೂ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

# ಜಗದ್ಗುರುಗಳ ಅಡ್ಡ ಪಲ್ಲಕ್ಕಿ ಮಹೋತ್ಸವ ಯಶಸ್ವಿಗೆ ಸಹಕಾರ:ಸೋಮನಗೌಡ

**ತಾಳಿಕೋಟೆ:ಜ.28:** ತಾಲೂಕಿನ ಚಬನೂರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಸಿದ್ದಿ ಪುರುಷ ಶ್ರೀ ರಾಮಲಿಂಗೇಶ್ವರ ಮಠದ ಹಾಗೂ ಸಭಾ ಭವನದ ಉದ್ಘಾಟನಾ ಕಾರ್ಯಕ್ರಮದ ಅಂಗವಾಗಿ ಫೇಬ್ರವರಿ 7 ರಂದು ನಡೆಯಲಿರುವ ಸದ್ದರ್ಮ ಸಮಾರಂಭದ ಅಂಗವಾಗಿ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಮಹಾ ಸಿಂಹಾಸನಾಧೀಶ್ವರ ಶ್ರೀಶ್ರೀಶ್ರೀ 1008 ಜಗದ್ಗುರು ಡಾ.ಸಿದ್ದಲಿಂಗ ರಾಜ ದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರ ಅಡ್ಡ ಫಲ್ಲಕ್ಕಿ ಮಹೋತ್ಸವದ ಕುಂಭ ಮೇಳದಲ್ಲಿ ಪಾಲ್ಗೊಳ್ಳುವ ಸುಮಾರು 5 ಸಾವಿರ ತಾಯಂದಿರರಿಗೆ ಕುಂಭ, ಸೀರೆ, ಒಳಗೊಂಡಂತೆ ಎಲ್ಲದಕ್ಕೆ ತನುಮನ ಧನದಿಂದ ತಾವೇ ಜವಾಬ್ದಾರಿ ಹೊತ್ತುಕೊಂಡು ನಿರ್ವಹಿಸುವದಾಗಿ ಮಾಜಿ ಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಅವರು ಹೇಳಿದರು.
ಚಬನೂರ ಗ್ರಾಮದ ಶ್ರೀ ರಾಮಲಿಂಗೇಶ್ವರ ಮಠದ ಆವರಣದಲ್ಲಿ ನಡೆದ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಮಹಾ ಸಿಂಹಾಸನಾಧೀಶ್ವರ ಶ್ರೀಶ್ರೀಶ್ರೀ 1008 ಜಗದ್ಗುರು ಡಾ.ಸಿದ್ದಲಿಂಗ ರಾಜ ದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರ ಅಡ್ಡ ಫಲ್ಲಕ್ಕಿ ಮಹೋತ್ಸವ ಯಶಸ್ವಿ ಕುರಿತು ಸೋಮವಾರರಂದು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಜಗದ್ಗುರುಗಳ ಅಡ್ಡ ಫಲ್ಲಕ್ಕಿ ಮಹೋತ್ಸವಕ್ಕೆ 25 ಸಾವಿರಕ್ಕೂ ಅಧಿಕ ಜನ ಸಂಖ್ಯೆ ಪಾಲ್ಗೊಳ್ಳುವ ನೀರಿಕ್ಷೆಯನ್ನು ಇಟ್ಟುಕೊಳ್ಳಲಾಗಿದೆ ಈ ಅದ್ದೂರಿ ಅಡ್ಡಫಲ್ಲಕ್ಕಿ ಮಹೋತ್ಸವದಲ್ಲಿ ಈಗಾಗಲೇ ಸುಮಾರು 5 ಸಾವಿರ ತಾಯಂದಿರರು ಕುಂಭ ಮೇಳದಲ್ಲಿ ಪಾಲ್ಗೊಳ್ಳುವ ನಿರಕ್ಷೆಯನ್ನು ಇಟ್ಟುಕೊಳ್ಳಲಾಗಿದೆ ಶ್ರೀಮಠದ ಶ್ರೀ ರಾಮಲಿಂಗಯ್ಯ ಸ್ವಾಮಿಗಳ ಅಪೇಕ್ಷೆಯಂತೆ ಮತ್ತು ನಾನುಕೂಡಾ ಶ್ರೀಮಠದ ಭಕ್ತನಾಗಿರುವದರಿಂದ ಮಠದ ಕಾರ್ಯಕ್ರಮದ ಯಶಸ್ವಿಗೆ ಕೈಜೋಡಿಸಬೇಕಾಗಿರುವದು ನನ್ನ ಕರ್ತವ್ಯವೂ ಕೂಡಾ ಆಗಿದೆ ಹೀಗಾಗಿ ಅಂದಿನ ಅಡ್ಡ ಫಲ್ಲಕ್ಕಿ ಮಹೋತ್ಸವಕ್ಕೆ ಸಂಬಂದಿಸಿ ನಾನು ಜವಾಬ್ದಾರಿಯುನ್ನು ಹೊತ್ತುಕೊಂಡು ಎಲ್ಲ ರೀತಿಯಿಂದಲೂ ಸಹಕರಿಸುತ್ತೇನೆಂದು ಮಾಜಿ ಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಅವರು ಹೇಳಿದರು.
ಇನ್ನೋರ್ವ ಬಿಜೆಪಿ ಮಾಜಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ(ಕೂಚಬಾಳ) ಅವರು ಮಾತನಾಡಿ ಈ ಭಾಗದಲ್ಲಿಯೇ ಅತ್ಯಂತ ಶಕ್ತಿಪೀಠವಾಗಿರುವ ಶ್ರೀ ರಾಮಲಿಂಗೇಶ್ವರ ಮಠವು ಪುರಾತನ ಮಠವಾಗಿದೆ ಶ್ರೀ ರಾಮಲಿಂಗೇಶ್ವರರು ಸಿದ್ದಿಪುರುಷರಾಗಿರುವದರಿಂದ ಈ ಭಾಗದ ಎಲ್ಲ ಜನರು ಸಂದಿಗ್ದ ಪರಸ್ಥಿತಿಗಳು ಎದುರಾದಾಗ ಶ್ರೀಗಳನ್ನು ನೆನಿಸಿಕೊಂಡಾಗ ಎಲ್ಲ ಕಷ್ಟಗಳು ತನ್ನಿಂದ ತಾನೇ ನಿವಾರಣೆಯಾಗಿರುವ ಸಾಕಷ್ಟು ಉದಾಹರಣೆಗಳು ಇವೆ ಇಂತಹ ಪವಾಡ ಸದೃಶ್ಯದ ಸಿದ್ದಿಪುರುಷ ಶ್ರೀ ರಾಮಲಿಂಗೇಶ್ವರರ ನೂತನ ಮಠದ ಉದ್ಘಾಟನೆಗೆ ಮಾಜಿ ಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಅವರ ಕುಂಭ ಮೇಳಕ್ಕೆ ಅವಶ್ಯವಿರುವ ಎಲ್ಲ ರೀತಿಯ ತನುಮನ ಧನದಿಂದ ಸಹಕಾರ ನೀಡಲು



ಮುಂದಾಗಿರುವದು ಶ್ರೀಮಠದ ಶಕ್ತಿ ಎತ್ತಿ ತೋರಿಸುತ್ತಿದೆ ಈ ಮಠದ ಉದ್ಘಾಟನೆಗೆ ತಾವು ಕೂಡಾ ಸಹಕರಿಸುವದಾಗಿ ಹೇಳಿದರು.
ದೇವರ ಹಿಪ್ಪರಗಿ ಜಡಿಮಠದ ಶ್ರೀ ಜಡಿಸಿದ್ದೇಶ್ವರ ಮಹಾಸ್ವಾಮಿಗಳು, ನಾವದಗಿ ಮಠದ ಶ್ರೀ ರಾಜೇಂದ್ರಒಡೆಯರ ಶಿವಾಚಾರ್ಯ ಮಹಾಸ್ವಾಮಿಗಳು, ಪರದೇಶಿಮಠದ ಶ್ರೀ ಶಿವಯೋಗಿ ಮಹಾಸ್ವಾಮಿಗಳು ಮತನಾಡಿ ಜಗದ್ಗುರುಗಳ ಅಡ್ಡ ಫಲ್ಲಕ್ಕಿ ಮಹೋತ್ಸವದಲ್ಲಿ ಪಾಲ್ಗೊಳ್ಳು ತಾಯಂದಿರರಿಗೆ ತಾಯಿಯ ಸ್ವರೂಪದಲ್ಲಿ ಗೌರವಿಸುವದರೊಂದಿಗೆ ಕುಂಭ ಮೇಳಕ್ಕೆ ಮೇರಗನ್ನು ಹೆಚ್ಚಿಸಲು ಮಾಜಿ ಶಾಸಕರಾದ ಸೋಮನಗೌಡ ಪಾಟೀಲ(ಸಾಸನೂರ) ಅವರು ಅವಶ್ಯವಿರುವ ಕುಂಭ, ಸೀರೆ ಒಳಗೊಂಡಂತೆ ಇನ್ನಿತರ ಜವಾಬ್ದಾರಿಯನ್ನು ಸ್ವತಃ ತಾವಾಗಿಯೇ ಹೊತ್ತುಕೊಂಡು ಶ್ರೀಮಠದ ಸೇವಾ ಕಾರ್ಯದಲ್ಲಿ ಪಾಲ್ಗೊಳ್ಳುತ್ತಿರುವದು ಅವರಿಗೆ ಶ್ರೀಮಠದ ಮೇಲಿನ ಭಕ್ತಿ ಏಷ್ಠಿದೆ ಎಂಬುದು ಎತ್ತಿ ತೋರಿಸುತ್ತಿದೆ ಅವರ ಸೇವಾ ಕಾರ್ಯಕ್ಕೆ ಶ್ರೀಮಠವು ಹಾಗೂ ಎಲ್ಲಶ್ರೀಗಳು ಬೆನ್ನೇಲುಭಾಗಿ ನಿಲ್ಲುವದರೊಂದಿಗೆ ಕಾರ್ಯಕ್ರಮದ ಯಶಸ್ವಿಗೆ ಮುಂದಾಗೋಣವೆಂದರು.
ಈ ಸಮಯದಲ್ಲಿ ಚಬನೂರ ಸಿದ್ದಿ ಪುರುಷ ಶ್ರೀ ರಾಮಲಿಂಗೇಶ್ವರ ಮಠದ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು, ಗ್ರಾಮದ ಮುಖಂಡರಾದ ಬಸನಗೌಡ ಪಾಟೀಲ, ಸೋಮನಗೌಡ ಪಾಟೀಲ, ಶರಣಗೌಡ ಪಾಟೀಲ, ಅವ್ವಣ್ಣ ಗ್ವಾತಗಿ, ಬಸಯ್ಯ ಹಿರೇಮಠ, ಮಂಜುನಾಥ ಕವಡಿಮಟ್ಟಿ ಒಳಗೊಂಡು ಶ್ರೀಮಠದ ಭಕ್ತಾಧಿಗಳು ಉಪಸ್ಥಿತರಿದ್ದರು.

# ತಾಯಿ ಮಕ್ಕಳ ಆಸ್ಪತ್ರೆಗಳು ಮಹಿಳೆಯರ ಆರೋಗ್ಯ ಸುರಕ್ಷತೆಯ ಕೇಂದ್ರಗಳಾಗಿವೆ: ಡಿಎಚ್‌ಓ ಡಾ.ಸುರೇಂದ್ರ ಬಾಬು

ಯುವಮಾರ್ಗ ಸುದ್ದಿ



**ರಾಯಚೂರು,ಜ.29–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ರಾಯಚೂರಿನ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಜನವರಿ 28ರಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ ಕಾರ್ಯಕ್ರಮ ನಡೆಯಿತು.

ಆಸ್ಪತ್ರೆಯಲ್ಲಿ ಜನನವಾದ ಹೆಣ್ಣು ಮಕ್ಕಳಿಗೆ ಹೊಸ ಉಡುಪು ಹಾಗೂ ಸಿಹಿ ಪದಾರ್ಥ ತಾಯಂದಿರಿಗೆ ವಿತರಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಪ್ರಸ್ತುತ ದಿನಗಳಲ್ಲಿ ಹೆರಿಗೆಯು ಕುಟುಂಬದ ಆರ್ಥಿಕ ತೊಂದರೆಗೆ ಕಾರಣವಾಗುತ್ತಿದೆ ಎಂಬ ನಂಬಿಕೆಯನ್ನು ದೂರಮಾಡಲು ಮತ್ತು ಮಗುವಿನ ಜನನದ ನಂತರ ಹೆಣ್ಣು ಗಂಡು ಎಂಬ ಭೇದ ತೊಲಗಿಸಲು ಮಹಿಳೆಯ ಆರೋಗ್ಯದ ದೃಷ್ಟಿಯಿಂದ ಕರ್ನಾಟಕ ಸರಕಾರವು ಸುಸಜ್ಜಿತ ಕಟ್ಟಡ, ಅತ್ಯಾಧುನಿಕ ಪರಿಕರಗಳು, ತಜ್ಞವೈದ್ಯರ ನೇಮಕದೊಂದಿಗೆ ತಾಯಿ ಮಕ್ಕಳ ಆಸ್ಪತ್ರೆಗಳನ್ನು ಜಿಲ್ಲೆಯ ರಾಯಚೂರು, ಮಾನ್ವಿ, ಸಿಂಧನೂರುಗಳಲ್ಲಿ ಜನಪ್ರತಿನಿಧಿಗಳ ಬೆಂಬಲ, ಜಿಲ್ಲಾಡಳಿತ ಮಾರ್ಗದರ್ಶನದಡಿ ಈಗಾಗಲೇ ಆರಂಭಿಸಲಾಗಿದೆ. ಹೆರಿಗೆಗೆ ಆಗಮಿಸುವ ಗರ್ಭಿಣಿಯು 'ಜನನಿ ಶಿಶು ಸುರಕ್ಷಾ ಯೋಜನೆ', ಸುಮನ್, ಲಕ್ಷ್ಯ ಕಾರ್ಯಕ್ರಮಗಳಡಿ ಸುರಕ್ಷಿತ ಹೆರಿಗೆಯೊಂದಿಗೆ ಸಂತಸದಿಂದ ನಗುಮಗು ವಾಹನದಲ್ಲಿ ಮನೆಗೆ ಮರಳುವ ಸುಂದರ ಕ್ಷಣಗಳನ್ನು ಹಂಚಿಕೊಳ್ಳಲಾಗುತ್ತಿದ್ದು, ಇದು ಜಿಲ್ಲೆಯಲ್ಲಿ ರಾಷ್ಟ್ರೀಯ ಹೆಣ್ಣು ಮಗು ದಿನದ ಸಂದರ್ಭದಲ್ಲಿ ತಾಯಿ ಮರಣಗಳ ತಡೆಯುವ ಜೊತೆಗೆ ಹೆಣ್ಣಿನ ಸುರಕ್ಷತೆಗೆ ಸರಕಾರದ ದಿಟ್ಟ ಹೆಜ್ಜೆಯಾಗಿದೆ. ಅಲ್ಲದೆ ಸರಕಾರದ ಯೋಜನೆಗಳ ಸದುಪಯೋಗ ಮಾಡಿಸುವ ಜೊತೆ ಜೊತೆಗೆ ಹೆಣ್ಣು ಮಗುವಿನ ಉನ್ನತ ಗುರಿ, ಸಾಧನೆಗೆ ಸಾಕ್ಷಿಯಾಗೋಣ ಎಂದು ತಿಳಿಸಿದರು. ಕುಟುಂಬದಲ್ಲಿ ಹೆಣ್ಣು ಎಂಬ ಭೇದ ಮಾಡದೆ ಮಗಳಿಗೆ ಆರೋಗ್ಯ ಇಲಾಖೆಯಡಿ ಬಾಲ್ಯದಲ್ಲಿಯೇ ಸಂಪೂರ್ಣ ಲಸಿಕೆ, ಹದಿಹರೆಯದಲ್ಲಿ ರಕ್ತಹೀನತೆಯ ವಿಷಚಕ್ರ ಅಳಿಸಲು 'ಅನಿಮೀಯಾ ಮುಕ್ತ ಪೌಷ್ಟಿಕ ಕರ್ನಾಟಕ ಯೋಜನೆಯಡಿ ಕಬ್ಬಿಣಾಂಶ ಮಾತ್ರೆಗಳ ಒದಗಿಸುವಿಕೆ, ವೈಯಕ್ತಿಕ ಆರೋಗ್ಯಕ್ಕಾಗಿ ಶುಚಿ ನ್ಯಾಪ್‌ಕಿನ್‌ಗಳ ಪೂರೈಕೆ, ಸ್ನೇಹ ಕ್ಲಿನಿಕ್ ಮೂಲಕ ಹದಿಹರೆಯದ ಸಮಸ್ಯೆಗಳಿಗೆ ಸ್ಪಂದನೆ, ಮದುವೆಯನ್ನು 18 ವರ್ಷ ತುಂಬಿದ ನಂತರ, 20 ವರ್ಷಗಳ ನಂತರ ಗರ್ಭವತಿಯಾಗುವಿಕೆಯ ಮಹತ್ವ ಕುರಿತು ಜಾಗೃತಿ ನೀಡಲಾಗುತ್ತಿದೆ ಎಂದರು.

**ಹೆಣ್ಣು ಭ್ರೂಣ ಹತ್ಯೆ ತಡೆಗೆ ನಿರಂತರ ನಿಗಾವಣೆ:** ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಜಿಲ್ಲೆಯಾದ್ಯಂತ ಸ್ಕ್ಯಾನಿಂಗ್ ಸೆಂಟರ್‌ಗಳ ನಿಗಾವಣೆಯೊಂದಿಗೆ, ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟುವಲ್ಲಿ ಆರೋಗ್ಯ ಇಲಾಖೆಯು ನಿರಂತರ ಜಾಗೃತಿ ಮೂಲಕ, ಪುರುಷ, ಸ್ತ್ರೀ ಅನುಪಾತದ ಸಮ ಪ್ರಮಾಣಕ್ಕಾಗಿ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣಲಿಂಗ ಪತ್ತೆ ಕಾಯ್ದೆ 1994ಕ್ಕೆ ಬಲ ತುಂಬಿದ್ದು, ಭ್ರೂಣ ಹತ್ಯೆ ತಡೆಗೆ ಕಾನೂನಿನಡಿ ಕಠಿಣ ಕ್ರಮ ಕೈಗೊಳ್ಳಲಾಗಿದ್ದು, ಭ್ರೂಣ ಲಿಂಗ ಪತ್ತೆಗೆ ಮುಂದಾದವರ ಬಗ್ಗೆ ಮಾಹಿತಿ ಕೊಟ್ಟವರಿಗೆ ನೀಡುವ ಬಹುಮಾನವನ್ನು ರೂ 50 ಸಾವಿರದಿಂದ ರೂ 1 ಲಕ್ಷಕ್ಕೆ ಏರಿಕೆ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಎನ್‌ಫೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ, ತಾಲೂಕ ಆರೋಗ್ಯಾಧಿಕಾರಿ ಡಾ ಅಮೃತ ಹುಕ್ಕೇರಿ, ಎಮ್‌ಸಿಹೆಚ್ ಆಡಳಿತ ವೈದ್ಯಾಧಿಕಾರಿ ಡಾ ಪ್ರಜ್ವಲ್‌ಕುಮಾರ್, ಪ್ರಸೂತಿ ತಜ್ಞೆ ಡಾ.ಶಾಲಿನಿ, ಅರವಳಿಕೆ ತಜ್ಞ ಡಾ ಸರ್ಫರಾಜ್ ಖಾಜಿ, ಮಕ್ಕಳ ತಜ್ಞ ಡಾ ಮೋಹಿಜಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸಯ್ಯ, ಮುಖ್ಯ ಶುಶ್ರೂಷಣಾ ಧಿಕಾರಿ ಸಲೋಮಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ ಕೆ, ನಾಗರಾಜ್, ಹಿರಿಯ ಹೆಚ್‌ಐಓ ಸುರೇಶ, ಹಿರಿಯ ಪಿಹೆಚ್‌ಸಿ ಓ ಈರಮ್ಮ, ಪಿ.ಸಿ.ಪಿ.ಎನ್.ಡಿ.ಟಿ.ಯ ಅಮರೇಶ ಗಡ್ಡಿ, ಎಮ್‌ಟಿಎಸ್ ಸಂಧ್ಯಾ, ಎಫ್‌ಡಿಎ ರಾಘವೇಂದ್ರ, ಫಾರ್ಮಾಸಿ ಅಧಿಕಾರಿ ಖಾಜಾಪಾಶಾ, ಲೆಕ್ಕಪರಿಶೋಧಕ ತಿಮ್ಮರಾಜು ಸೇರಿದಂತೆ ತಾಯಂದಿರು, ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಯಚೂರು ಉತ್ಸವ: ಆರ್‌ಟಿಪಿಎಸ್, ಕೆಪಿಸಿ ಡಿಎವಿ, ಬ್ಲೆಸ್ಡ್ ಆಲ್ಫೋನ್ಸಾ ಪೌಢಶಾಲೆಗಳಲ್ಲಿ ಪ್ರಚಾರ

ಯುವಮಾರ್ಗ ಸುದ್ದಿ



**ರಾಯಚೂರು,ಜ.29–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಹಯೋಗದಲ್ಲಿ ಫೆ.5ರಿಂದ ಮೂರು ದಿನಗಳ ಕಾಲ ರಾಯಚೂರು ಜಿಲ್ಲೆಯಲ್ಲಿ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಪ್ರಚಾರ ಕಾರ್ಯಕ್ರಮಗಳು ಜನವರಿ 28ರಂದು ಶಕ್ತಿನಗರದಲ್ಲಿನ ಆರ್‌ಟಿಪಿಎಸ್‌ನಲ್ಲಿ ಹಾಗೂ ಕೆಪಿಸಿ ಡಿಎವಿ ಪೌಢಶಾಲೆ ಮತ್ತು ಬ್ಲೆಸ್ಡ್ ಆಲ್ಫೋನ್ಸಾ ಪೌಢಶಾಲೆಗಳಲ್ಲಿ ನಡೆದವು. ಪ್ರಚಾರ ಸಮಿತಿಯ ಸದಸ್ಯರು ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿ ಸದಾಶಿವಪ್ಪ ಅವರು ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಬಹುವರ್ಷಗಳ ನಂತರ ಜಿಲ್ಲಾ ಉತ್ಸವ ನಿಗದಿಯಾಗಿದೆ. ಇದು ನಮ್ಮೆಲ್ಲರ ಮನೆಯ ಹಬ್ಬವಾಗಿದೆ. ನಮ್ಮೂರಿನ ವಿವಿಧ ಕಲೆ ಸಾಹಿತ್ಯ ಪ್ರಕಾರಗಳ ಅನಾವರಣವು ಇಲ್ಲಿ ನಡೆಯಲಿದೆ. ಖ್ಯಾತ ಕಲಾವಿದರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ. ಎಲ್ಲರೂ ಸೇರಿ ಕಾರ್ಯಕ್ರಮದಲ್ಲಿ ಭಾಗಿಯಾ ಗಿ, ಉತ್ಸವ ಯಶಗೊಳಿಸೋಣ ಎಂದು ಇದೆ ವೇಳೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ನಾಗರಾಜ, ಗ್ರಂಥಾಲ ಯ ಇಲಾಖೆಯ ಮರೆಪ್ಪ ಸೇರಿದಂತೆ ಪ್ರಚಾರ ಸಮಿತಿಯ ಇನ್ನಿತರ ಸದಸ್ಯರು ಇದ್ದರು.

# ಜಿಲ್ಲೆಯ ಎಲ್ಲ ಗ್ರಾಮಗಳು, ಹೋಬಳಿ, ತಾಲೂಕು ಕೇಂದ್ರಗಳಲ್ಲಿ ಉತ್ಸವದ ಬ್ಯಾನರ್ ಅಳವಡಿಸಿ ಪ್ರಚಾರ ನೀಡಲು ಸಿಇಓ ಸೂಚನೆ

ಯುವಮಾರ್ಗ ಸುದ್ದಿ



**ರಾಯಚೂರು,ಜ.29–** ಬಹುವರ್ಷಗಳ ನಂತರ ರಾಯಚೂರು ಜಿಲ್ಲೆಯಲ್ಲಿ ಫೆ.5, ಫೆ.6 ಮತ್ತು ಫೆ.7ರಂದು ಮೂರು ದಿನಗಳ ಕಾಲ ನಿಗದಿಯಾದ ರಾಯಚೂರು ಜಿಲ್ಲಾ ಉತ್ಸವ ಯಶಸ್ಸಿಗೆ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ನ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಶ್ರಮಿಸಬೇಕು. ಉತ್ಸವದ ಬಗ್ಗೆ ಎಲ್ಲೆಡೆ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಜನವರಿ 28ರಂದು ನಡೆದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿ, ಜಿಲ್ಲಾ ಉತ್ಸವದ ಹಿನ್ನೆಲೆಯಲ್ಲಿ ಫೆ.2 ಮತ್ತು ಫೆ.3 ರಂದು ಮಕ್ಕಳ ಹಬ್ಬ ಸಹ ಜರುಗಲಿದೆ. ಈ ಎಲ್ಲ ಕಾರ್ಯಕ್ರಮಗಳ ಬಗ್ಗೆ ಜಿಲ್ಲೆಯ ಪ್ರತಿಯೊಂದು ಗ್ರಾಮಕ್ಕೂ ಮಾಹಿತಿ ರವಾನೆಯಾಗಬೇಕು. ಈ ದಿಶೆಯಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಎಲ್ಲ ಪಿಡಿಓ ಅವರು ತಮ್ಮ ತಮ್ಮ ಹಂತದಲ್ಲಿ ಸಭೆ ನಡೆಸಿ ಪ್ರಚಾರ ಕಾರ್ಯ ಕೈಗೊಳ್ಳಬೇಕು. ಎಲ್ಲ ಗ್ರಾಮಗಳು, ಹೋಬಳಿಗಳು ಸೇರಿದಂತೆ ಎಲ್ಲ ತಾಲೂಕು ಕೇಂದ್ರಗಳ ಪ್ರಮುಖ ಸ್ಥಳದಲ್ಲಿ ಉತ್ಸವದ ಮಾಹಿತಿಯ ಬ್ಯಾನರನ್ನು ಅಳವಡಿಸುವ ಕಾರ್ಯವನ್ನು ಅತೀ ತುರ್ತಾಗಿ ಮಾಡಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಎಲ್ಲರೂ ಒಗ್ಗೂಡಿ ಉತ್ಸವವನ್ನು ಯಶಸ್ಸುಗೊಳಿಸಬೇಕು. ಉತ್ಸವದಲ್ಲಿ ಲೀಡ್ ಬ್ಯಾಂಕ್ ಸಹಕಾರದಲ್ಲಿ ಸ್ಟಾಲ್ ಸ್ಥಾಪಿಸಿ, ಕೇಂದ್ರ ಸರ್ಕಾರದ ಪಿಎಂಎಸ್ಬಿವೈ, ಪಿಎಂಜೆಜೆವೈ ವಿಮೆ ನೋಂದಣಿ ಮಾಡಲಾಗುವುದು. ಮುಖ್ಯವಾಗಿ ನಿರುದ್ಯೋಗಿ ಯುವಕರನ್ನು ನೋಂದಣಿ ಮಾಡುವ ಮೂಲಕ ಉದ್ಯೋಗ ಮೇಳ ಯಶಸ್ವಿಗೊಳಿಸಬೇಕು. ಪ್ರತಿ ತಾಲೂಕಿನಿಂದ ಪಂಚ ಗ್ಯಾರಂಟಿಗಳ ತಲಾ ಒಂದು ಯೋಜನೆಯ 25–30 ಫಲಾನುಭವಿಗಳನ್ನು ಕರೆ ತರಬೇಕು. ಸ್ವ ಸಹಾಯ ಗುಂಪುಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸ್ಟಾಲ್ ವ್ಯವಸ್ಥೆ ಕಲ್ಪಿಸಲಾಗುವುದು. ಆಹಾರ ಮೇಳ, ಗೃಹ ಉತ್ಪನ್ನಗಳ ಮಾರಾಟಕ್ಕೆ ವಿವಿಧ ಜಿಲ್ಲೆಗಳು, ಅಂತರ ರಾಜ್ಯಗಳಿಂದ ವ್ಯಾಪಾರಸ್ಥರು ಆಗಮಿಸಲಿದ್ದಾರೆ ಎಂದು ಸಿಇಓ ಅವರು ಅಧಿಕಾರಿಗಳಿಗೆ ಮಾಹಿತಿ ನೀಡಿದರು. ಈ ವೇಳೆ ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ತಾಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಲಾರಿ ಬಸ್ ಡಿಕ್ಕಿ ಐದು ಜನರಿಗೆ ಗಂಭೀರ ಗಾಯ



**ಜೇವರ್ಗಿ :ಜ.29–**ಸಮೀಪದ ತಾಲೂಕಿನ ಕಟ್ಟಿಸಂಗಾವಿ ಹತ್ತಿರ ಇರುವ ಹಸನಾಪುರ್ ಕ್ರಾಸ್ ಸರ್ಕಾರಿ ಬಸ್ಸು ಮತ್ತು ಲಾರಿ ಡಿಕ್ಕಿಯಾಗಿ ಐದು ಜನ ಗಂಭೀರ ಗಾಯವಾಗಿದ್ದು ಜೇವರ್ಗಿ ಸರ್ಕಾರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ನಂತರ ಕಲಬುರ್ಗಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡುತ್ತಿದ್ದಾರೆ ಎಂಬ ಮೂಲಗಳಿಂದ ತಿಳಿದು ಬಂದಿದೆ

ಈ ಸಂಬಂಧ ಪರ್ತಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಫೆಬ್ರವರಿ 10ರಂದು ಗ್ರಾಹಕರ ಕುಂದು ಕೊರತೆ ಸಭೆ

**ರಾಯಚೂರು,ಜ.29–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗ ಅಧೀಕ್ಷಕ ಅಭಿಯಂತರರು ಇವರ ಅಧ್ಯಕ್ಷತೆಯಲ್ಲಿ ಫೆಬ್ರವರಿ 10 ಬೆಳಗ್ಗೆ 10ಗೆ ಗ್ರಾಹಕರ ಕುಂದು ಕೊರತೆ ಸಂವಾದ ಸಭೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯುತ್ ಗ್ರಾಹಕರು ಹಾಜರಾಗಿ ವಿದ್ಯುತ್ ದೂರುಗಳ ಬಗ್ಗೆ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ

ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.06ರಂದು ಶ್ವಾನಗಳ ಪ್ರದರ್ಶನ

**ರಾಯಚೂರು,ಜ.29–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರಾಣಿದಯಾ ಸಂಘ,ಕೃ.ವಿ.ವಿ, ಪಶುಪಾಲನಾ ಇಲಾಖೆ ಹಾಗೂ ಕರ್ನಾಟಕ ಪಶುವೈದ್ಯಕೀಯ ಸಂಘ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನಲ್ಲಿ ಫೆ.06ರಂದು ನಗರದ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯ ಆವರಣದಲ್ಲಿ ಶ್ವಾನಗಳ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ನಾಗರಿಕರು ಹಾಗೂ ಶ್ವಾನ ಪ್ರಿಯರು ಭಾಗವಹಿಸುವಂತೆ ಕೋರಲಾಗಿದೆ.

ಈ ಪ್ರದರ್ಶನದಲ್ಲಿ ಭಾಗವಹಿಸಿದ ಎಲ್ಲಾ ಶ್ವಾನಗಳಿಗೆ ಉಚಿತವಾಗಿ ರೇಬೀಸ್ ಲಸಿಕೆಯನ್ನು ಹಾಕಲಾಗುವುದು ಎಂದು ಪಶುಪಾಲನಾ ಇಲಾಖೆ ಇಲಾಖೆಯ ಉಪನಿರ್ದೇಶಕರಾದ ಡಾ.ಪೋಮಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಕ್ಷ್ಮಣ ಲೇಔಟ್ ನಿವಾಸಿಯಾದ ಅಲ್ಬರ್ಟ ಜಾನ್ ಕಾಣೆ: ಪತ್ತೆಗೆ ನೇತಾಜಿ ನಗರ ಪೊಲೀಸರ ಮನವಿ

ಯುವಮಾರ್ಗ ಸುದ್ದಿ



**ರಾಯಚೂರು,ಜ.29–**ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಲಕ್ಷ್ಮಣ ಲೇಔಟ್ ನಿವಾಸಿಯಾದ ಅಲ್ಬರ್ಟ ಜಾನ್ ತಂದೆ ಜಾನ್ ಬಾಸ್ಕರ್ (41) ಎಂಬ ಯುವಕ ಜನವರಿ 08ರ ಬೆಳಿಗ್ಗೆ 05 ಗಂಟೆಯ ಸುಮಾರಿಗೆ ಟಿಫಿನ್ ತೆಗೆದುಕೊಂಡು ಬರುತ್ತೇನೆ ಅಂತಾ ಹೇಳಿ ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಠಾಣೆಯಲ್ಲಿ ಅಪರಾಧ ಸಂಖ್ಯೆ:04/2026 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

**ಚಹರೆ ಪಟ್ಟಿ: ವಯಸ್ಸು:** 41, 5.6 ಫೀಟ್ ಎತ್ತರ, ದುಂಡು ಮುಖ, ಸಧೃದ ಮೈ ಕಟ್ಟು, ಸಾದ ಕೆಂಪು ಮೈ ಬಣ್ಣ, ತಲೆಯಲ್ಲಿ ಕಪ್ಪು ಬಣ್ಣದ ಕೂದಲು, ಕುರುಚಲ ಗಡ್ಡ, ಬಲಗಡೆ ಕಪ್ಪು ಬಣ್ಣದ ನರ್ಲೇ, ಗಾಢಕಂದು ಬಣ್ಣದ ಪ್ಯಾಂಟ್, ತಿಳಿ ಹಸಿರು ಬಣ್ಣದ ತುಂ ಬು ತೋಳಿನ ಶರ್ಟ ಧರಿಸಲಾ ಗಿದ್ದು, ತೆಲುಗು, ಹಿಂದಿ, ಇಂಗ್ಲೀಷ ಹಾಗೂ ಕನ್ನಡ ಭಾಷೆ ಮಾತನಾಡು ತ್ತಾರೆ. ಈ ಚಹರೆವುಳ್ಳ ಮನುಷ್ಯ ಕಂಡಲ್ಲಿ ಮತ್ತು ಸುಳಿವು ಸಿಕ್ಕಲ್ಲಿ ನೇತಾಜಿ ನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532–240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂ: 08532–235635, 08532–235100, 9480803800 ಅಥವಾ ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803846, ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803831ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಉಪ ನೋಂದಣಿ ಕಚೇರಿಯಲ್ಲಿ ಪೇಪರ್ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆ ಕುರಿತು ತರಬೇತಿ

**ರಾಯಚೂರು,ಜ.29–** ಪೇಪರ್ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯನ್ನು ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಜಿಲ್ಲೆಯ ಪ್ರತಿ ಉಪ ನೋಂದಣಿ ಕಚೇರಿಯಲ್ಲಿ ಪೇಪರ್ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯ ಕುರಿತು ತರಬೇತಿಯನ್ನು ಹಮಿಕೊಳ್ಳಲಾಗಿದ್ದು, ತರಬೇತಿಯ ಸದುಪಯೋಗವನ್ನು ಸಾರ್ವಜನಿಕರು ಪಡೆಯಬಹುದಾಗಿದೆ.

ತರಬೇತಿಯಲ್ಲಿ ಸಂಬಂಧಪಟ್ಟ ದಸ್ತಾವೇಜು ಬರಹಗಾರರು, ವಕೀಲರು, ಕರ್ನಾಟಕ ಒನ್, ರಾಯಚೂರು ಒನ್, ಗ್ರಾಮ ಒನ್, ಮತ್ತು ಬಾಪೂಜಿ ಸೇವಾ ಕೇಂದ್ರ ವರ್ಗದವರಿಗೆ ತರಬೇತಿಯನ್ನು ಜಿಲ್ಲೆಯ ಉಪನೋಂದಣಾಧಿಕಾರಿಗಳ ಕಚೇರಿಗಳಾದ ಲಿಂಗಸೂಗೂರಿನಲ್ಲಿ ಜನವರಿ 30, ಸಿರವಾರದಲ್ಲಿ ಹಾಗೂ ರಾಯಚೂರಿನಲ್ಲಿ ಜನವರಿ 31ರಂದು ತರಬೇತಿ ನಡೆಯಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನವರಿ 31ರಂದು ಸಿಂಧನೂರಿನಲ್ಲಿ ಕೈಗಾರಿಕೋದ್ಯಮಿಗಳಿಗೆ ಅರಿವು ಕಾರ್ಯಕ್ರಮ

**ರಾಯಚೂರು,ಜ.29–** ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025–26ನೇ ಸಾಲಿನ ರಾಂಪ್ ಯೋಜನೆಯಡಿಯಲ್ಲಿ ಚಇಆ & ಐಇಂಓ ಣಟಿಜಜಡಿ ಖಂಒಕ ಯೋಜನೆ ಕುರಿತು ಕೆಎಸ್‌ಎಮ್‌ಸಿಎ ಬೆಂಗಳೂರು ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಸಿಂಧನೂರಿನ ವಿನಯ್ ರೆಸಿಡೆನ್ಸಿ ಹೋಟೆಲ್‌ನಲ್ಲಿ ಜನವರಿ 31ರ ಬೆಳಿಗ್ಗೆ 10.30ಕ್ಕೆ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಿಂಧನೂರು, ಮಸ್ಕಿ ತಾಲ್ಲೂಕು ಹಾಗೂ ಸುತ್ತಮುತ್ತಲಿನ ಕೈಗಾರಿಕಾ ಘಟಕಗಳ ಮುಖ್ಯಸ್ಥರು, ಉದ್ದಿಮೆದಾರರು ಈ ಕಾರ್ಯಾಗಾರದಲ್ಲಿ ಭಾಗವಹಿಸಿ ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಲಕ್ಷ್ಮೀಕಾಂತ ಕುಲಕರ್ಣಿ ಸಹಾಯಕ ನಿರ್ದೇಶಕರ ಮೊಬೈಲ್ ಸಂಖ್ಯೆ: 8861241093ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರು ಡಿಕ್ಕಿ ಹೊಡೆದು ವ್ಯಕ್ತಿ ಸಾವು: ಆರೋಪಿಗೆ ಶಿಕ್ಷೆ



**ಕಲಬುರಗಿ,ಜ.29–**ಕಾರು ಡಿಕ್ಕಿ ಹೊಡೆದು ವ್ಯಕ್ತಿಯೊಬ್ಬನ ಸಾವಿಗೆ ಕಾರಣನಾದ ಆರೋಪಿಗೆ ಇಲ್ಲಿನ 3ನೇ ಜೆ.ಎಂ.ಎಫ್.ಸಿ.ನ್ಯಾ ಯಾಲಯ 1 ಸಾವಿರ ರೂ.ದಂಡ ಮತ್ತು 6 ತಿಂಗಳ ಶಿಕ್ಷೆ ವಿಧಿಸಿದೆ.2023ರಲ್ಲಿ ನಂದೂರ (ಕೆ) ಹತ್ತಿರ ಕಾರು ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡು ಲಕ್ಷ್ಮಣ ಎಂಬಾತ ಮೃತಪಟ್ಟಿದ್ದ.

ಈ ಸಂಬಂಧ ಆರೋಪಿ ಬಸವರಾಜ ಮರ ಗೋಳ ವಿರುದ್ಧ ಪ್ರಕರಣ ದಾಖಲಾಗಿತ್ತು. ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಅಧಿಕಾ ರಿಗಳಾದ ಗೋಪಾಲ ಆರ್.ರಾಠೋಡ್ ಮತ್ತು ಬಸವರಾಜ ತೇಲಿ ಅವರು ಪ್ರಕರಣದ ತನಿಖೆ ನಡೆಸಿ ಆರೋಪಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಕಲಬುರಗಿಯ 3ನೇ ಜೆ.ಎಂ.ಎಫ್. ಸಿ.ನ್ಯಾಯಾಲಯದ ನ್ಯಾಯಾಧೀಶರಾದ ಲಲೀತಾ ಕುದರಿಮತಿ ಅವರು ವಾದ–ವಿವಾದಗಳನ್ನು ಆಲಿಸಿ ಆರೋಪಿ ಬಸವರಾಜ ಮರಗೋಳಗೆ 1 ಸಾವಿರ ರೂ.ದಂಡ ಹಾಗೂ 6 ತಿಂಗಳ ಶಿಕ್ಷೆ ವಿಧಿಸಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕರಾದ ಶಿವಶರಣಪ್ಪ ಹೋತಪೇಟ ಅವರು ವಾದ ಮಂಡಿಸಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H